ಸಂಪುಟ : 9 ಸಂಚಿಕೆ 177 ಪುಟ : 4 ಬೆಲೆ: 3.00 ಮಂಗಳವಾರ ಆಗಸ್ಟ್ 20 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 177 Pages : 4 Price : 3.00 Tuesday August 20 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶ್ರೀ ರಾಘವೇಂದ್ರಸ್ವಾಮಿಗಳ ಆರಾಧನೆ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಶ್ರೀ ರಾಘವೇಂದ್ರ ಉತ್ಸವ ಮಂಡಳಿ ವತಿಯಿಂದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಆಗಸ್ಟ್ 20ರಿಂದ ಮೂರು ದಿನಗಳ ಕಾಲ ಶ್ರೀ ರಾಘವೇಂದ್ರ ಸ್ವಾಮಿಗಳವರ 353ನೇ ಆರಾಧನಾ ಕಾರ್ಯಕ್ರಮಗಳು ಜರುಗಲಿವೆ.

ಆ. 20ರಂದು ಪ್ರಥಮಾರಾಧನೆ ನಿಮಿತ್ತ ಬೆಳಿಗ್ಗೆ 5 ಗಂಟೆಗೆ ಶ್ರೀ ಗುರುಪದಹಾರ ಪಾರಾಯಣ, 7ಕ್ಕೆ ಅಷ್ಟೋತ್ತರ, ಪಂಚಾಮೃತ, ಅಲಂಕಾರ, ಮಂಗಳಾರತಿ, 10ಕ್ಕೆ ಶ್ರೀ ರಾಘವೇಂದ್ರಾಯ ನಮಃ ಅಷ್ಟಾಕ್ಷರ ಜಪಹೋಮ, ಸಂಜೆ 5ಕ್ಕೆ ಶ್ರೀ ಲಕ್ಷ್ಮೀನಾರಾಯಣ ಭಜನಾ ಮಂಡಳ ಇವರಿಂದ ಭಜನಾಮೃತ, 6ಕ್ಕೆ ಪಂ. ಶ್ರೀ ವರದಾಚಾರ್ಯ ಜಾಲಿಹಾಳ ಇವರಿಂದ ಉಪನ್ಯಾಸ, 7.30ಕ್ಕೆ ಲಘು ರಥೋತ್ಸವ ಜರುಗುವವು.

ಆ.21ರಂದು ಮಧ್ಯಾರಾಧನೆ ನಿಮಿತ್ತ ಬೆಳಿಗ್ಗೆ 5 ಗಂಟೆಗೆ ಶ್ರೀ ಗುರುಪದಹಾರ ಪಾರಾಯಣ, 7ಕ್ಕೆ ಅಷ್ಟೋತ್ತರ, ಪಂಚಾಮೃತ, ಅಲಂಕಾರ, ಮಂಗಳಾರತಿ, 10.30ಕ್ಕೆ ಮನ್ಯುಸೂಕ್ತ ಹೋಮ, ಸಂಜೆ 5ಕ್ಕೆ ಚೈತನ್ಯ ಸಂಗೀತ ಪಾಠಶಾಲೆ ವಿದ್ಯಾರ್ಥಿಗಳಿಂದ ಭಜನಾ ಕಾರ್ಯಕ್ರಮ, 6.30ಕ್ಕೆ ಪಂ. ಪಾಂಡುರಂಗಾಚಾರ್ಯ ಜಾಲಿಹಾಳ ಇವರಿಂದ ಉಪನ್ಯಾಸ, ರಾತ್ರಿ 8.30ಕ್ಕೆ ಲಘು ರಥೋತ್ಸವ ಜರುಗುವುದು.

ಆ. 22ರಂದು ಉತ್ತರಾರಾಧನೆ ನಿಮಿತ್ತ ಬೆಳಿಗ್ಗೆ 7ಕ್ಕೆ ಅಷ್ಟೋತ್ತರ, ಪಂಚಾಮೃತ, ಅಲಂಕಾರ, ನಂತರ 10ಕ್ಕೆ ಮಹಾರಥೋತ್ಸವ, ರಾತ್ರಿ 8.30ಕ್ಕೆ ಮಂಗಳಾರತಿ, ತೊಟ್ಟಿಲು ಸೇವೆ ಮುಂತಾದ ಕಾರ್ಯಕ್ರಮಗಳು ಜರುಗಲಿವೆ ಎಂದು ಶ್ರೀ ರಾಘವೇಂದ್ರಸ್ವಾಮಿ ಉತ್ಸವ ಮಂಡಳಿ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಇವರ ವತಿಯಿಂದ 2024-25ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧರು, ಸಿಖ್ಖರು, ಪಾರ್ಸಿ, ಜನಾಂಗದವರಿಗೆ ಅರಿವು ನವೀಕರಣ ವಿದ್ಯಾಭ್ಯಾಸ ಸಾಲ ಯೋಜನೆಯಡಿಯಲ್ಲಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗುವ ಮೆಡಿಕಲ್ (ಎಂಬಿಬಿಎಸ್, ಎಂಡಿಎಂಎಸ್) ಡೆಂಟಲ್ ಮೆಡಿಕಲ್ (ಬಿಡಿ ಎಸ್, ಎಂ.ಡಿಎಸ್), ಆಯುಷ್ (ಬಿ.ಆಯುಷ್), ಇಂಜನೀಯರಿಂಗ್ ಮತ್ತು ಟೆಕ್ನಾಲಜಿ ( ಬಿ.ಇ, ಬಿ.ಟೆಕ್, ಎಂ.ಇ. ಎಂಟೆಕ್) ಬ್ಯಾಚಲರ್ ಆಫ್ ಆರ್ಕಿಟೆಕ್ಚರ್, ಎಂ.ಬಿ.ಎ, ಎಂ.ಸಿ ಎ, ಎಲ್.ಎಲ್.ಬಿ, ಬಿ.ಎಸ್‌ಸಿ ಇನ್ ಹಾರ್ಟಿಕಲ್ಚರ್, ಅಗ್ರಿಕಲ್ಚರ್ ಇಂಜನೀಯರಿಂಗ್, ಡೈರಿ ಟೆಕ್ನಾಲಜಿ, ಫಾರೆಸ್ಟಿ, ವೆಟರ್ನರಿ ಮತ್ತು ಎನಿಮಲ್ ಟೆಕ್ನಾಲಜಿ, ಫಿಶರೀಸ್, ಸೆರಿಕಲ್ಚರ್, ಹೋಮ್ / ಕಮ್ಯುನಿಟಿ ಸೈನ್ಸ್, ಫುಡ್ ನ್ಯೂಟ್ರಿಷನ್ ಮತ್ತು ಡಯಟೀಸ್, ಬಿ.ಫಾರ್ಮಾ, ಎಂ., ಫಾರ್ಮಾ, ಫಾರ್ಮಾಡಿ, ಫಾರ್ಮಾ ಎಂ. ಇಂತಹ ಕೋರ್ಸಗಳಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಅರಿವು (ರಿನ್ಯೂವಲ್) ಸಾಲ ಯೋಜನೆಯಡಿ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ನಿಗಮದ ವೆಬ್‌ಸೈಟ್ https://kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ 1ನೇ ಮಹಡಿ, ಜಿಲ್ಲಾ ನ್ಯಾಯಾಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ, ಗದಗ ದೂ.ಸಂ. 08372-295147 ಇಲ್ಲಿ ಸಂಪರ್ಕಿಸಬಹುದಾಗಿದೆ.

### ರಾಜ್ಯಪಾಲರ ನಡೆಯನ್ನು ಖಂಡಿಸಿ ಜಿಲ್ಲಾ ಕಾಂಗ್ರೆಸ್‌ನಿಂದ ಪ್ರತಿಭಟನೆ

## ರಾಜಕೀಯ ಶಕ್ತಿಗಳಿಂದ ಅಧಿಕಾರ ದುರುಪಯೋಗ

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆಯನ್ನು ಖಂಡಿಸಿ ಸೋಮವಾರ ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ನೇತೃತ್ವದಲ್ಲಿ ನಗರದ ಕಿತ್ತೂರು ರಾಣಿ ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪಾದಯಾತ್ರೆ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರು, ಕೆಲಕಾಲ ಧರಣಿ ನಡೆಸಿದರು.



ಈ ಸಂದರ್ಭದಲ್ಲಿ ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜನಪ್ರಿಯತೆ, ಬಡವರ ಪರವಾದ ಕಾರ್ಯಕ್ರಮಗಳನ್ನು ವಿರೋಧಿಸುವ ಕೇಂದ್ರ ಸರಕಾರ ಮತ್ತು ರಾಜಕೀಯ ಶಕ್ತಿಗಳು ರಾಜಭವನವನ್ನು ದುರುಪಯೋಗ ಮಾಡಿಕೊಂಡಿರುವುದು ಸ್ಪಷ್ಟವಾಗಿದೆ. ರಾಜ್ಯಪಾಲರ ನಡೆಯನ್ನು ರಾಜಕೀಯವಾಗಿ ಮತ್ತು ಕಾನೂನು ರೀತಿಯಿಂದ ಎದುರಿಸುತ್ತೇವೆ. ಮಂತ್ರಿಮಂಡಲದ 33 ಸದಸ್ಯರು, ಒಟ್ಟು 136 ಶಾಸಕರು ಸಿದ್ದರಾಮಯ್ಯ ಪರ ಇದ್ದೇವೆ. ಈ ಹೋರಾಟದಲ್ಲಿ ಜಯ ಸಾಧಿಸುತ್ತೇವೆ ಎಂದರು.



ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲ ಮಾತನಾಡಿ, ರಾಜ್ಯಪಾಲರ ನಡೆ ಸ್ಪಷ್ಟ ಜನಾದೇಶದ ಸರಕಾರವನ್ನು ಅಸ್ಥಿರಗೊಳಿಸುವ ಷಡ್ಯಂತ್ರವಾಗಿದೆ. ಇದರಿಂದ ಕೇಂದ್ರ ಸರಕಾರದ ರಾಜಕೀಯ ಹಿತಾಸಕ್ತಿಗಳಿಂದ ಪ್ರಭಾವಿತವಾಗಿದೆ ಎನ್ನುವುದು ಸ್ಪಷ್ಟವಾಗಿದೆ. ಬಿಜೆಪಿ ಹಾಗೂ ಜೆಡಿಎಸ್ ರಾಜ್ಯಪಾಲರ ಕಚೇರಿಯನ್ನು ದುರುಪಯೋಗ ಮಾಡಿಕೊಂಡು ಮುಖ್ಯಮಂತ್ರಿಗಳ ವಿರುದ್ಧ ಸೇಡಿನ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದರು.

ರಾಜ್ಯಪಾಲರ ನಡೆ ಸಂವಿಧಾನದ ಮೌಲ್ಯಗಳಿಗೆ ತೀವ್ರ ಧಕ್ಕೆ ತಂದಿದೆ. ಸಾಂವಿಧಾನಿಕ ಹುದ್ದೆಯಲ್ಲಿದ್ದರೂ ಒಂದು ರಾಜಕೀಯ ಪಕ್ಷದ ಏಜೆಂಟರಾಗಿ ಕಾರ್ಯನಿರ್ವಹಿಸುವ ರಾಜ್ಯಪಾಲರ ನಡೆ ಪ್ರಜಾಸತ್ತಾತ್ಮಕ ವ್ಯವಸ್ಥೆಗೆ ಮಾರಕವಾಗಿದೆ. ಹೀಗಾಗಿ ರಾಷ್ಟ್ರಪತಿಗಳು ತಕ್ಷಣ ರಾಜ್ಯಪಾಲರಿಗೆ ನಿರ್ದೇಶನ ನೀಡಿ, ಪ್ರಾಸಿಕ್ಯೂಶನ್ ಮಂಜೂರಾತಿ ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ, ಸುಜಾತಾ ದೊಡ್ಡಮನಿ, ವಿ.ಬಿ. ಸೋಮನಕಟ್ಟಿಮಠ, ಟಿ. ಈಶ್ವರ, ಬಿ.ಬಿ. ಅಸೂಟಿ, ವಿದ್ಯಾಧರ ದೊಡ್ಡಮನಿ, ಕೃಷ್ಣಗೌಡ ಪಾಟೀಲ, ಅಶೋಕ ಮಂದಾಲಿ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

> ಕೇಂದ್ರ ಮಂತ್ರಿ ಕುಮಾರಸ್ವಾಮಿ ವಿರುದ್ಧ ಲೋಕಾಯುಕ್ತ ತನಿಖೆ ನಡೆಸಿ ವರದಿ ಕೊಟ್ಟಿದೆ. ಆದರೂ ಅವರ ವಿರುದ್ಧ ಕ್ರಮ ಕೈಗೊಳ್ಳದ ರಾಜ್ಯಪಾಲರು, ಕೇವಲ ಒಬ್ಬ ವ್ಯಕ್ತಿ ದೂರು ನೀಡಿದ ಕಾರಣಕ್ಕೆ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಶನ್‌ಗೆ ಅನುಮತಿ ಕೊಟ್ಟಿದ್ದಾರೆ. ಅಲ್ಲದೇ ಕುಮಾರಸ್ವಾಮಿ, ಪ್ರಹ್ಲಾದ ಜೋಶಿ, ಶೋಭಾ ಕರಂದ್ಲಾಜೆ ಸಹಿತ ಅನೇಕ ಕೇಂದ್ರ ಮಂತ್ರಿಗಳು 10 ದಿನ ತಡೆಯಿರಿ, ರಾಜ್ಯಪಾಲರು ಸಿಎಂ ವಿರುದ್ಧ ಪ್ರಾಸಿಕ್ಯೂಶನ್‌ಗೆ ಅನುಮತಿ ಕೊಡುತ್ತಾರೆ ಎಂದು ಭವಿಷ್ಯ ನುಡಿದಿರುವುದು ನೋಡಿದರೆ, ರಾಜ್ಯಪಾಲರು ಒಂದು ಪಕ್ಷದ ಕೈಗೊಂಬೆಯಾಗಿರುವುದು ಸ್ಪಷ್ಟವಾಗುತ್ತದೆ.
>
> **-ಎಚ್.ಕೆ. ಪಾಟೀಲ.**
> **ಕಾನೂನು, ಪ್ರವಾಸೋದ್ಯಮ ಸಚಿವರು.**



### ಕರ್ನಾಟಕ ಯುವ ಶಕ್ತಿ ವೇದಿಕೆಯಿಂದ ಮನವಿ

## ಜನಪ್ರತಿನಿಧಿಗಳನ್ನು ಅನರ್ಹಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಅಧಿಕಾರಿಗಳ ಕುಮ್ಮಕ್ಕಿನಿಂದ ನಗರಸಭೆಯ ಆಸ್ತಿ ನುಂಗಲು ನಡೆದಿರುವ ಪ್ರಯತ್ನದ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಕರ್ನಾಟಕ ಯುವ ಶಕ್ತಿ ವೇದಿಕೆ ರಾಜ್ಯ ಉಪಾಧ್ಯಕ್ಷ ಮುತ್ತಣ್ಣ ಅನವಾಲದ ನೇತೃತ್ವದಲ್ಲಿ ನಗರದ ಗಾಂಧಿ ಸರ್ಕಲ್‌ನಲ್ಲಿ ಪ್ರತಿಭಟನೆಯ ಮೂಲಕ ಗದಗ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುತ್ತಣ್ಣ ಅನವಾಲದ, ನಗರಸಭೆಯ ಅಧಿಕಾರಿಗಳು ಇಂತಹ ಕೃತ್ಯದಲ್ಲಿ ಶಾಮೀಲಾಗಿ ಕೋಟಿ ಕೋಟಿ ಹಣವನ್ನು ನುಂಗಲು ಪ್ರಯತ್ನಿಸಿರುವುದು ನಾಚಿಕೆಯ ವಿಷಯ. ಇಂತಹ ದುಷ್ಕೃತ್ಯ ಎಸಗಿರುವ ಜನಪ್ರತಿನಿಧಿಗಳನ್ನು ಅನರ್ಹಗೊಳಿಸಿ ಶಾಮೀಲಾದ ಅಧಿಕಾರಿಗಳನ್ನು ಅಮಾನತ್ತು ಮಾಡಿ ತಕ್ಕ ಶಿಕ್ಷೆಯನ್ನು ಕೊಡಬೇಕೆಂದು ಒತ್ತಾಯಿಸಿದರು.



ಸಂಘಟನೆಯ ಪದಾಧಿಕಾರರಿಗಳಾದ ಮಂಜುಳಾ ಕಲಕೇರಿ, ವಿಜಯಲಕ್ಷ್ಮೀ ಅನವಾಲದ, ಸುಮಂಗಲಾ ಡಂಬಳ, ಸುಶೀಲಾ ಚಲವಾದಿ, ಜ್ಯೋತಿ ಲದ್ವಾ, ಕವಿತಾ ಸಿದ್ದಲಿಂಗ ಮಹಮ್ಮದ ಯೂಸೂಫ ಮುಲ್ಲಾ, ದಾವುದ ಉಳ್ಳಾಗಡ್ಡಿ, ಗಂಗಾ ಚಕ್ರಣ್ಣವರ, ಡಾ. ತನುಜಾ, ಗಂಗಾಧರ ಕಾಡಪ್ಪನವರ, ಶ್ರೀಕಾಂತ ಗೌಡರ, ಆನಂದ ವಾಲ್ಮೀಕಿ, ಆನಂದ ಶಾಂತಗಿರಿ, ಲಕ್ಷ್ಮಣ ಶಿರೂರ, ನಜೀರಸಾಬ ನರೇಗಲ್ಲ, ಮಕ್ಬೂಲ ಬಳ್ಳಾರಿ, ಜಹೀರ ನಮಾಜಿ, ಎಂ.ಎ. ಕೊಟ್ಟೂರ, ಅನ್ವರ ಶಿರಹಟ್ಟಿ, ಹಸೀನಾ ಅದೋನಿ, ಸರೋಜಾ ರಸಲಕರ, ಮಕ್ಬೂಲ್ ಡಂಬಳ, ಮಹೇಶ ಹೊಸಳ್ಳಿ, ಸಂತೋಷ ಅನವಾಲದ, ಸುಷ್ಮಾ ಕೊರ್ಲಹಳ್ಳಿ, ಬಾಳಮ್ಮ ಬೆನಕಳ್ಳಿ, ಯಲ್ಲಮ್ಮ ಬಳ್ಳಾರಿಗುಂಡಿ, ರೇಷ್ಮಾ ಬಳ್ಳಾರಿ ಮುಂತಾದವರು

### ಶ್ರೀ ನುಲಿಯ ಚಂದಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ್

## ಶರಣರ ಸಂದೇಶಗಳು ನಿತ್ಯ ಜೀವನದ ಭಾಗವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾನ್ ವ್ಯಕ್ತಿಗಳ ಜಯಂತಿ ಆಚರಣೆಯ ಮೂಲಕ ಸಾಮಾಜಿಕ ಕ್ರಾಂತಿಯಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜರುಗಿದ ಶ್ರೀ ನುಲಿಯ ಚಂದಯ್ಯನವರ ಜಯಂತಿ ಅಂಗವಾಗಿ ಶ್ರೀ ನುಲಿಯ ಚಂದಯ್ಯನವರ ಭಾವಚಿತ್ರಕ್ಕೆ ಪುಷ್ಪಸಮರ್ಪಿಸಿ ಅವರು ಮಾತನಾಡಿದರು.



ಅನುಭವ ಮಂಟಪದ ಶರಣರಲ್ಲಿಯೇ ದೇವರ ಜೊತೆ ವಾದಕ್ಕಿಳಿದವರಲ್ಲಿ ನುಲಿಯ ಚಂದಯ್ಯನವರು ಒಬ್ಬರು. ಇದರಿಂದ ಅವರ ಗಟ್ಟಿ ಮತ್ತು ದೃಢ ವಿಶ್ವಾಸವುಳ್ಳ ಸ್ವಭಾವ ತಿಳಿದುಬರುತ್ತದೆ. ಅವರಿಗೆ ಶಿವಮೊಗ್ಗದ ಹತ್ತಿರದ ಸಾರ್ವಜನಿಕರು ಕೆರೆಯ ಉಪಯೋಗಕ್ಕೆ ನಿರಾಕರಿಸಿದಾಗ, ಸಮಾಜಕ್ಕೆ ಎದರು ನಿಂತು ಪ್ರತ್ಯೇಕವಾದ ಬಾವಿ ಸೃಷ್ಟಿಸಿದ ಮಹಾನ್ ವ್ಯಕ್ತಿ ನುಲಿಯ ಚಂದಯ್ಯನವರು ಎಂದರು.

ಶ್ರೇಣೀಕೃತ ವ್ಯವಸ್ಥೆಯಲ್ಲಿ ಸಾಮಾಜಿಕವಾಗಿ ಹಿಂದುಳಿದ ಶ್ರೇಷ್ಠ ಶರಣರಿಗೆ ಪುರಾತನ ಕಾಲದಿಂದಲೂ ಅನ್ಯಾಯ ಆಗಿದೆ. ಮೇಲ್ವರ್ಗದವರ ಸಾಹಿತ್ಯ ಮಾತ್ರ ಪ್ರಚಲಿತವಾಗಿದ್ದು, ಹಿಂದುಳಿದ ವರ್ಗಗಳಿಗೆ ಸೇರಿದ ಶರಣರ ಸಾಹಿತ್ಯ ಇಂದಿಗೂ ಲಭ್ಯವಿಲ್ಲ ಮತ್ತು ಹಿಂದುಳಿದ ಸಾಹಿತ್ಯವನ್ನು ಪ್ರೇರೇಪಿಸಲಿಲ್ಲ. ಹಾಗಾಗಿ ಶ್ರೇಷ್ಠ ಶರಣರ, ಮಹಾನ್ ಯೋಗಿಗಳ ಜಯಂತಿ ಆಚರಿಸುವುದಕ್ಕೆ ಸರ್ಕಾರ ಪ್ರಾರಂಭಿಸಿತು. ಈ ಮೂಲಕ ಶ್ರೇಷ್ಠ ಶಿವಶರಣರ ನಿಲುವು ಸಾಹಿತ್ಯ ಕಾಯಕಗಳನ್ನು ಅರ್ಥೈಸುವ ಕಾರ್ಯ ಆಗಲಿ ಎಂದು ನುಡಿದರು.

ಕೇವಲ ಸಮಾನವಾಗಿ ಹಣ ವಿತರಿಸಿದರೆ ಸಾಮಾಜಿಕ ನ್ಯಾಯ ಬರಲಾರದು. ಸಮಾಜವು ಸಾಂಸ್ಕೃತಿಕ, ಸಾಹಿತ್ಯಕ, ಆಧ್ಯಾತ್ಮಿಕವಾಗಿ ಮುಂದಾದಾಗ ಮಾತ್ರ ಸಾಮಾಜಿಕ ನ್ಯಾಯ ದೊರೆಯುತ್ತದೆ. ಪ್ರತಿಯೊಬ್ಬರೂ ನುಲಿಯ ಚಂದಯ್ಯನವರ ಸಂದೇಶಗಳನ್ನು ನಿತ್ಯ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು, ಮುಂದಿನ ವರ್ಷದ ಜಯಂತಿ ಆಚರಣೆ ಸಂದರ್ಭದಲ್ಲಿ ನುಲಿಯ ಚಂದಯ್ಯನವರ ವಚನಗಳನ್ನು ಒಳಗೊಂಡ ಪುಸ್ತಕವನ್ನು ಬಿಡುಗಡೆಗೊಳಿಸಬೇಕು ಎಂದು ಸೂಚಿಸಿದರು.

ಶಿಕ್ಷಕರಾದ ಶಿವಾನಂದ ಭಜಂತ್ರಿ ಮಾತನಾಡಿ, ನುಲಿಯ ಚಂದಯ್ಯನವರು, ಬಸವಣ್ಣನವರ ಸಮಕಾಲೀನರು, ಗುರು ಭಕ್ತಿ, ಲಿಂಗ ಜಂಗಮ ಕಾಯಕ ಸಿದ್ಧಾಂತವನ್ನು ಬಲವಾಗಿ ನಂಬಿದವರು, ಸಮಾಜಕ್ಕೆ ಬೆಳಕು ನೀಡುವಲ್ಲಿ ಶ್ರಮಿಸಿದವರು ಎಂದರು.

ಕಲ್ಯಾಣದ ಕ್ರಾಂತಿಯ ನಂತರ ಚನ್ನಬಸವಣ್ಣನವರ ಅಕ್ಕ ನಾಗಮ್ಮನವರು ಶಿವಮೊಗ್ಗ ಜಿಲ್ಲೆಯ ಎತ್ತಿನ ಹೊಳೆಯಲ್ಲಿ ಲಿಂಗೈಕ್ಯರಾದರು. ಧರ್ಮ ಕಾಯಕ ನಿಷ್ಠೆಗೆ ಸದಾ ಸಿದ್ಧರಾಗಿದ್ದ ಅವರು ಅರಮನೆ ವಾತಾವರಣ ಧಿಕ್ಕರಿಸಿ ಧರ್ಮ ಕಾಯಕ, ದಾಸೋಹದಂತಹ ಮೌಲ್ಯಗಳನ್ನು ಪ್ರಚಾರ ಮಾಡಿದ್ದಾರೆ. ನುಲಿಯ ಚಂದಯ್ಯನವರು ಸರಳ ಮತ್ತು ಬಹುಮುಖ ವ್ಯಕ್ತಿತ್ವ ಹೊಂದಿದವರಾಗಿದ್ದು, ಕಾಯಕ ಅಂದರೆ ನುಲಿಯ ಚಂದಯ್ಯನವರು ಎನ್ನುವಂತೆ ಹೆಸರುವಾಸಿ ಆಗಿದ್ದರು ಎಂದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಸುರೇಶ ಕಟ್ಟಿಮನಿ, ಮೋಹನ ಭಜಂತ್ರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಸೇರಿದಂತೆ ಸಮಾಜದ ಗಣ್ಯರು ಹಾಜರಿದ್ದರು.

> ನುಲಿ ಅಂದರೆ ಹಗ್ಗ ಎಂದರ್ಥ. ಹಗ್ಗದಿಂದ ಉರುಳನ್ನು ಹಾಕಿಕೊಳ್ಳಬಹುದು, ಹಾಗೇ ಆ ನಿಷ್ಠೆಯ ಕಾಯಕ ಕಾರ್ಯದಿಂದ ಕೈಲಾಸಕ್ಕೂ ಹೋಗಬಹುದು. ನುಲಿಯ ಚಂದಯ್ಯನವರು ಸತ್ಯ, ಕಾಯಕದಿಂದ ಮುಕ್ತಿ ಪಡೆದು ಪ್ರತಿಯೊಬ್ಬರೂ ದುಡಿದು ತಿನ್ನಬೇಕು ಮತ್ತು ದುಡಿದಿದ್ದರಲ್ಲಿ ದಾಸೋಹ ಮಾಡುವ ಸಮಾಜ ನಿರ್ಮಾಣವಾಗಬೇಕು ಎಂದು ಅವರು ಸಾರಿದ್ದಾರೆ ಎಂದು ಶಿವಾನಂದ ಭಜಂತ್ರಿ ಉಪನ್ಯಾಸ ನೀಡಿದರು.

ವಚನ ಶ್ರಾವಣ ಕಾರ್ಯಕ್ರಮದಲ್ಲಿ ಎನ್.ಎಂ. ಪವಾಡಿಗೌಡ್ರ ವಿಷಾದ

# ಶರಣರ ಚಿಂತನೆಗಳು ಮಾಯಾವಾಗಿವೆ

■ವಿಜಯಸಾಕ್ಷಿ ಸುದ್ದಿ, , ಲಕ್ಕುಂಡಿ

ಆಧುನಿಕತೆಯ ಆಕರ್ಷಣೆಯ ನಡುವೆ ಶ್ರಾವಣ ಮಾಸದ ಸಂಸ್ಕೃತಿ, ಸಂಪ್ರದಾಯವು ಮಹತ್ವ ಕಳೆದುಕೊಂಡಿದೆ ಎಂದು ಪ್ರಾಚಾರ್ಯ ಎನ್. ಎಂ. ಪವಾಡಿಗೌಡ್ರ ವಿಷಾದ ವ್ಯಕ್ತಪಡಿಸಿದರು.

ಇಲ್ಲಿಯ ವಿರುಪಾಕ್ಷೇಶ್ವರ ದೇಗುಲದ ಪ್ರಾಂಗಣದಲ್ಲಿ ಗದಗ ಬಸವ ದಳ, ಬಸವ ಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ ಹಾಗೂ ವಿರುಪಾಕ್ಷೇಶ್ವರ ಭಜನಾ ಸಂಘದ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವಚನ ಶ್ರಾವಣ ಕಾರ್ಯಕ್ರಮವನ್ನು ಉದ್ದೇಶಿಸಿ ಅವರಯ ಮಾತನಾಡಿದರು.

ಶಿಕ್ಷಣ ಕಲಿಕೆಯು ಹೆಚ್ಚಾದಂತೆಲ್ಲಾ ಸಿನಿಮಾ, ಟಿ.ವಿ ಹಾಗೂ ಮೊಬೈಲ್ ವೀಕ್ಷಿಸುವ ಹಾಗೂ ಕೇಳುವ ಮನರಂಜನೆಗೆ ಮನುಷ್ಯ ಮನಸೋತಿದ್ದಾನೆ. ಇದರಿಂದ ಮನುಷ್ಯನ ಅಂತರಂಗದ ಬಲ ಕುಗ್ಗಿದೆ. ಅದರಲ್ಲೂ ಯುವ ಪೀಳಿಗೆಯ ಮನಸ್ಸು ಮೊಬೈಲ್ ಮನರಂಜನೆಗೆ ಅಂಟಿಕೊಂಡಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ವೈಜ್ಞಾನಿಕವಾಗಿ, ಲೌಕಿಕವಾಗಿ ಪ್ರಗತಿಯಾಗಿದೆ. ಆದರೆ ಸಕಲರಿಗೂ ಲೇಸನ್ನೇ ಬಯಸಯವ ಶರಣರ ಚಿಂತನೆಗಳು ಮಾಯಾವಾಗಿವೆ. ಮನುಷ್ಯ ಚಂದ್ರಯಾನ ಮಾಡಿದ್ದಾನೆ, ಅನೇಕ ವಿಜ್ಞಾನ-ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಜಗತ್ತು ಅಭಿವೃದ್ಧಿಯಾಗುತ್ತಿದ್ದರೂ ಮನಃಶಾಂತಿಗಾಗಿ ಕೊನೆಗೆ ಶರಣರ ವಚನ ಧರ್ಮವೇ ಆಶ್ರಯ ಕೊಡುತ್ತಿರುವುದು ಅತ್ಯಂತ ಮಹತ್ವ ಪಡೆದುಕೊಂಡಿದೆ. ಈ ನಿಟ್ಟಿನಲ್ಲಿ 12ನೇ ಶತಮಾನದಲ್ಲಿ ಬಸವಣ್ಣನವರು ಅನುಭವ ಮಂಟಪದಲ್ಲಿ ಎಲ್ಲ ಸಮುದಾಯದವರನ್ನು ಒಗ್ಗೂಡಿಸಿಕೊಂಡು ಲಿಂಗಾಯತ ಧರ್ಮವನ್ನು ಸ್ಥಾಪಿಸಿದರು. ಅದರಲ್ಲಿ ಲಕ್ಕುಂಡಿಯಲ್ಲಿ ಜನಿಸಿದ ಅಜಗಣ್ಣ ಮುಕ್ತಾಯಕ್ಕರು ಪ್ರಮುಖರಾಗಿದ್ದು, ಅವರ ವಚನಗಳು ಸಮಾಜದಲ್ಲಿಯ ಅಂಧಕಾರವನ್ನು ಹೋಗಲಾಡಿಸಲು ಪ್ರಮುಖ ಪಾತ್ರ ವಹಿಸಿವೆ ಎಂದರು.




ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಮಾತನಾಡಿ, ಶರಣರ ತತ್ವೋಪದೇಶಗಳು ಇಂದಿನ ನಮ್ಮ ಒತ್ತಡದ ಬದುಕಿಗೆ ಪೂರಕವಾಗಿವೆ. ಮನೆ ಮನೆಯಲ್ಲಿ ಶರಣರ ವಚನ ಚಿಂತನೆ ನಡೆಯಬೇಕು. ಮಕ್ಕಳಿಗೆ ವಚನಗಳನ್ನು ಕಂಠಪಾಠ ಮಾಡುವ ಪರಿಪಾಠ ಬೆಳೆಸಬೇಕು. ಇಂತಹ ಕಾರ್ಯಕ್ರಮಗಳನ್ನು ಗ್ರಾಮದ ಗಲ್ಲಿ ಗಲ್ಲಿಗಳಲ್ಲಿ ಹಮ್ಮಿಕೊಂಡು ಜಾಗೃತಿ ಮೂಡಿಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಬಸವ ದಳದ ಅಧ್ಯಕ್ಷ ವಿ.ಕೆ. ಕರಿಗೌಡ್ರ ಮಾತನಾಡಿ, ಅಜಗಣ್ಣ, ಮುಕ್ತಾಯಕ್ಕರು ಜನಿಸಿದ ಲಕ್ಕುಂಡಿ ಗ್ರಾಮದಲ್ಲಿ ಅಜಗಣ್ಣನ ಗದ್ದುಗೆ ಸಹ ಪತ್ತೆಯಾಗಿದೆ. ಆದ್ದರಿಂದ ಅಜಗಣ್ಣ ಮುಕ್ತಾಯಕ್ಕರ ಜೀವನ ಚರಿತ್ರೆಯ ಸಂಶೋಧನೆಗಾಗಿ ಅಜಗಣ್ಣ ಮುಕ್ತಾಯಕ್ಕರ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡುವುದರೊಂದಿಗೆ ಗದ್ದುಗೆಯ ಸ್ಥಳವೂ ಅಭವೃದ್ಧಿಯಾಗಬೇಕು ಎಂದು ಒತ್ತಾಯಿಸಿದರು.

ಇತಿಹಾಸ ತಜ್ಞ ಅ.ದ. ಕಟ್ಟಿಮನಿ ಅಜಗಣ್ಣ ಮುಕ್ತಾಯಕ್ಕ, ಅಜಗಣ್ಣ ನೆಲೆಸಿದ್ದ ಸೋಮೇಶ್ವರ ದೇಗುಲ, ಅಲ್ಲಮಪ್ರಭುದೇವರ ಮಠ ಸೇರಿದಂತೆ ಲಕ್ಕುಂಡಿ ಇತಿಹಾಸದ ಕುರಿತು ವಿವರಿಸಿದರು. ವಿರುಪಾಕ್ಷೇಶ್ವರ ಭಜನಾ ಸಂಘದ ಕಾರ್ಯಕರ್ತರು ಬಸವಣ್ಣನ ವಚನವನ್ನು ಹಾಡಿದರು. ಬಸವ ದಳದ ಶರಣೆಯರಿಂದ ಸಾಮೂಹಿಕ ವಚನ ಪ್ರಾರ್ಥನೆ ನಡೆಯಿತು.

ಬಸವ ಕೇಂದ್ರದ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ, ಹಾಲ್ಲಪ್ಪ ಮುಸ್ಕಿನಭಾವಿ, ಈರಪ್ಪ ಸೊಪ್ಪಿನ, ವಿರುಪಾಕ್ಷಪ್ಪ ಕಲಕೇರಿ, ಬುದ್ಧಿವಂತಪ್ಪ ಹಡಗಲಿ ವೇದಿಕೆಯಲ್ಲಿದ್ದರು. ಶಿವಪ್ಪ ಭಜಂತ್ರಿ ಸ್ವಾಗತಿಸಿದರು. ಪ್ರಕಾಶ ಅಸುಂಡಿ ನಿರೂಪಿಸಿದರು. ವಿ.ಸಿ. ಕುಂಬಾರ ವಂದಿಸಿದರು.

# ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬಾಗೇವಾಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಆಗಸ್ಟ್ 21ರಂದು ತ್ರೈಮಾಸಿಕ ನಿರ್ವಹಣೆ ಕೆಲಸ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಬಾಗೇವಾಡಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಿರಂತರಜ್ಯೋತಿ, ಕೃಷಿ ನೀರಾವರಿ ಪಂಪ್‌ಸೆಟ್‌ಗಳ ಮಾರ್ಗಗಳು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

# ನಾಳೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಸಂಭಾಪೂರ ರೋಡ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಆಗಸ್ಟ್ 21ರಂದು ತ್ರೈಮಾಸಿಕ ನಿರ್ವಹಣೆ ಕೆಲಸ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಸಂಭಾಪೂರ ರೋಡ್ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ನಿರಂತರಜ್ಯೋತಿ, ಕೃಷಿ ನೀರಾವರಿ ಪಂಪ್‌ಸೆಟ್‌ಗಳ ಮಾರ್ಗಗಳು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

ಕೇಂದ್ರ ಸಚಿವರಿಗೆ ಸಂಸದ ಬಸವರಾಜ ಬೊಮ್ಮಾಯಿ ಪತ್ರ

# ಪಿಎಂಎಫ್‌ಬಿವೈ ಯೋಜನೆಯಡಿ ಬೆಳೆ ವಿಮೆ ಕೊಡಿಸಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಾವೇರಿ ಜಿಲ್ಲೆಯ ರೈತರ ಬೆಳೆ ವಿಮೆಯನ್ನು ಪಿಎಂಎಫ್‌ಬಿವೈ ಅಡಿಯಲ್ಲಿ ಶೀಘ್ರವಾಗಿ ಇತ್ಯರ್ಥಪಡಿಸುವಂತೆ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವರಾದ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿಯವರು ವಿನಂತಿಸಿದ್ದಾರೆ.

ಈ ಬಗ್ಗೆ ಸಚಿವರಿಗೆ ಪತ್ರ ಬರೆದಿರುವ ಸಂಸದ ಬಸವರಾಜ ಬೊಮ್ಮಾಯಿ, ನನ್ನ ಲೋಕಸಭಾ ಕ್ಷೇತ್ರ ಹಾವೇರಿ ಜಿಲ್ಲೆಯ ರೈತರು 2023-24ನೇ ಸಾಲಿನ ಖಾರಿಫ್ ಹಂಗಾಮಿನಲ್ಲಿ ಅಸಮರ್ಪಕ ಮಳೆಯಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಒಂದು ವರ್ಷ ಕಳೆದರೂ ಅವರಿಗೆ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ವಿಮಾ ಪರಿಹಾರ ದೊರೆಕಿಲ್ಲ.

ಹಾವೇರಿ ಜಿಲ್ಲೆಯಲ್ಲಿ ಬೆಳೆ ವಿಮೆ ಪರಿಹಾರವನ್ನು ವಿತರಿಸಲು ರಿಲಾಯನ್ಸ್ ಜನರಲ್ ಇನ್ಶೂರೆನ್ಸ್ ಕಂಪನಿ ಲಿಮಿಟೆಡ್ ಜವಾಬ್ದಾರಿಯನ್ನು ಹೊಂದಿದ್ದು, ಸದರಿ ಕಂಪನಿಯು ಕೆಲವೊಂದು ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದೆ.

ಅವರ ಆಕ್ಷೇಪಣೆಗಳಿಗೆ ಜಿಲ್ಲಾ ಮಟ್ಟದ ಮೇಲ್ವಿಚಾರಣೆ ಸಮಿತಿಯು ಸಮರ್ಪಕ ಉತ್ತರವನ್ನು ಸಲ್ಲಿಸಿದೆ. ರಿಲಾಯನ್ಸ್ ಜನರಲ್ ಇನ್ಸುರೆನ್ಸ್ ಕಂಪನಿ ಎತ್ತಿರುವ ಆಕ್ಷೇಪಗಳು ನ್ಯಾಯಸಮ್ಮತವಾಗಿಲ್ಲ.

ಅಲ್ಲದೆ ವಿಮೆ ಪರಿಹಾರ ನೀಡಲು ಅನಗತ್ಯ ವಿಳಂಬ ತಂತ್ರ ಅನುಸರಿಸುತ್ತಿರುವಂತಿದೆ ಎಂದು ತಿಳಿಸಿದ್ದಾರೆ. ಹಾವೇರಿ ಜಿಲ್ಲೆಯ ರೈತರು ಈಗಾಗಲೇ ಬರ ಹಾಗೂ ಪ್ರವಾಹದಿಂದ ತತ್ತರಿಸಿದ್ದು, ಇದರಿಂದ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ.

ಆದ್ದರಿಂದ ಈ ವಿಷಯದಲ್ಲಿ ತಾವು ಆಗಸ್ಟ್ 22ಎಂದು ನಡೆಯುವ ತಾಂತ್ರಿಕ ಸಲಹಾ ಸಮಿತಿ ಸಭೆಯಲ್ಲಿ ವಯಕ್ತಿಯ ಆಸಕ್ತಿ ವಹಿಸಿ, ರೈತರಿಗೆ ಬೆಳೆ ವಿಮೆ ಪರಿಹಾರ ಕೊಡಿಸಿ ನೆರವಾಗಬೇಕು ಎಂದು ಮನವಿ ಮಾಡಿದ್ದಾರೆ.

ರಾಜ್ಯ ಸರ್ಕಾರದ ಕೃಷಿ ಸಚಿವರಾದ ಚಲುವರಾಯಸ್ವಾಮಿ ಅವರಿಗೂ ಸಂಸದರು ಪತ್ರ ಬರೆದಿದ್ದು, ರೈತರಿಗೆ ಬೆಳೆ ಪರಿಹಾರ ಕೊಡಿಸುವುದು ರಾಜ್ಯ ಸರ್ಕಾರದ ಆದ್ಯ ಕರ್ತವ್ಯವಾಗಿದೆ. ರಾಜ್ಯ ಸರ್ಕಾರ ರೈತರಿಗೆ ಬೆಳೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

# ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಆಡಳಿತ ಬದ್ಧ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಳೆಯಿಂದ ಶಾಲೆ ಹಾಗೂ ಆವರಣಗಳಲ್ಲಿ ನುಗ್ಗಿದ ಮಳೆ ನೀರಿನಿಂದಾಗಿ ಶಾಲಾ ವಿದ್ಯಾರ್ಥಿಗಳಿಗೆ ತೊಂದರೆಯಾಗಿದ್ದ ಹಿನ್ನೆಲೆಯಲ್ಲಿ ಸೋಮವಾರ ರಾಜೂರು, ನೆಲ್ಲೂರು ಗ್ರಾಮಗಳಲ್ಲಿನ ಶಾಲೆಗಳಿಗೆ ತಹಸೀಲ್ದಾರ್ ಹಾಗೂ ತಾ.ಪಂ ಇಒ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಮಾತನಾಡಿ, ತಾಲೂಕಿನಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ತಾಲೂಕಾಡಳಿತ ಪ್ರಥಮ ಆದ್ಯತೆ ನೀಡಿದೆ. ದೇಶದ ಭವಿಷ್ಯವಾಗಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಎಲ್ಲ ಅಗತ್ಯ ಸಹಕಾರ ನೀಡಲು ಆಡಳಿತ ಬದ್ಧವಾಗಿದೆ. ಇತ್ತೀಚೆಗೆ ಸುರಿದ ಮಳೆಯಿಂದ ರಾಜೂರ ಹಾಗೂ ಮುಶಿಗೇರಿ ಗ್ರಾ.ಪಂ ವ್ಯಾಪ್ತಿಯ ನೆಲ್ಲೂರ ಗ್ರಾಮದ ಶಾಲಾವರಣವು ಜಲಾವೃತವಾಗಿದ್ದ ಪರಿಣಾಮ ವಿದ್ಯಾರ್ಥಿಗಳ ಕಲಿಕೆಗೆ ತೊಂದರೆಯಾಗಿ-ತ್ತು. ಮುಂದಿನ ದಿನಗಳಲ್ಲಿ ಇಂತಹ ಸಮಸ್ಯೆ ಉದ್ಭವ ಆಗಬಾರದು.

ಗ್ರಾ.ಪಂ ಅಧ್ಯಕ್ಷರು ಮತ್ತು ಪಿಡಿಓಗಳು ಸಮಸ್ಯೆ ಪರಿಹಾರಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಅದಕ್ಕೆ ಬೇಕಾದ ಸಹಾಯ-ಸಹಕಾರವನ್ನು ಗಜೇಂದ್ರಗಡ ತಾಲೂಕು ಪಂಚಾಯತ್ ಕಾರ್ಯಾಲಯ, ತಹಸೀಲ್ದಾರ್ ಕಾರ್ಯಾಲಯದಿಂದ ನೀಡಲಾಗುವುದು ಎಂದರು.

ರಾಜೂರು ಗ್ರಾಮದ ಶಾಲೆಯ ಮುಂಭಾಗದ ಚರಂಡಿ ಸ್ವಚ್ಛತಾ ಕಾರ್ಯವನ್ನು ತ್ವರಿತಗತಿಯಲ್ಲಿ ಕೈಗೊಂಡು ಪೂರ್ಣಗೊಳಿಸುವಂತೆ ಹಾಗೂ ನೆಲ್ಲೂರು ಗ್ರಾಮದ ಶಾಲಾವರಣದಲ್ಲಿ ನಿಲ್ಲುವ ನೀರಿಗೆ ಕಡಿವಾಣ ಹಾಕಲು ತಡೆಗೋಡೆ ನಿರ್ಮಿಸುವ ಅವಶ್ಯಕತೆಯಿದೆ. ತಕ್ಷಣಕ್ಕೆ ತಾತ್ಕಾಲಿಕ ಕೆಲಸವನ್ನು ನಡೆಸಲು ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಪಿಡಿಓಗಳಿಗೆ ಸೂಚಿಸಿದರು. ಈ ವೇಳೆ ತಾ.ಪಂ ಇಒ ಬಸವರಾಜ ಬಡಿಗೇರ ತಹಸೀಲ್ದಾರ್‌ಗೆ ಸಾಥ್ ನೀಡಿದರು.

ಗ್ರಾಪಂ ಸದಸ್ಯ ವೀರಪ್ಪ ಅಂಗಡಿ, ಶಾಲಾ ಮುಖ್ಯೋಪಾಧ್ಯಾಯ ಎಸ್.ಕೆ. ಕವಡಿಮಟ್ಟಿ, ವಿ.ಎಸ್. ಹೊಸಳ್ಳಿ, ಎಂ.ಪಿ. ಪಾಟೀಲ, ಶರಣಯ್ಯ ಮಾಸಗಟ್ಟಿ, ಅಮರಯ್ಯ ಭೂಸನೂರಮಠ, ರವಿ ಬೆಲ್ಲಪ್ಪನವರ, ಲೋಹಿತ್ ರಾಠೋಡ, ಬಾಲಪ್ಪ ಲಮಾಣಿ, ಶಿವಾನಂದಯ್ಯ ಬೆನಹಾಳ ಸೇರಿ ಅರಣ್ಯ ಇಲಾಖೆ ಅಧಿಕಾರಿಗಳು ಇದ್ದರು.

78ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಜರುಗಿದ ಸಾಂಸ್ಕೃತಿಕ ನೃತ್ಯ ರೂಪಕ

# ತೋಂಟದಾರ್ಯ ಶಾಲೆಗೆ ಪ್ರಥಮ ಸ್ಥಾನ




■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜಗದ್ಗುರು ತೋಂಟದಾರ್ಯ ಶಿಕ್ಷಣ ಸಂಸ್ಥೆಯ ತೋಂಟದಾರ್ಯ ಕನ್ನಡ ಹಾಗೂ ಆಂಗ್ಲಮಾಧ್ಯಮ ಶಾಲೆಯು 78ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಪ್ರದರ್ಶಿಸಿದ ನೃತ್ಯ ರೂಪಕಕ್ಕೆ ಪ್ರಥಮ ಸ್ಥಾನ ಲಭಿಸಿದೆ.

ಉತ್ತರ ಕರ್ನಾಟಕದ ಸಹ್ಯಾದ್ರಿ ಪರ್ವತ ಎನಿಸಿದ ಕಪ್ಪತಗುಡ್ಡದ ಮಹತ್ವ, ದೇಶದ ಎರಡು ಕಣ್ಣುಗಳಾದ ರೈತ ಹಾಗೂ ಸೈನಿಕ (ಜೈ ಜವಾನ್-ಜೈ ಕಿಸಾನ್) ಸಂದೇಶವನ್ನಿಟ್ಟುಕೊಂಡು ಸಂಯೋಜಿಸಿದ ನೃತ್ಯ ರೂಪಕವನ್ನು ತೋಂಟದಾರ್ಯ ಶಾಲೆಯ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕೂಡಿ ಪ್ರದರ್ಶಿಸಿದ್ದು, ಈ ನೃತ್ಯ ರೂಪಕವು ನೆರೆದ ಜನಸ್ತೋಮಕ್ಕೆ ಅಂದಿನ ಆಕರ್ಷಣೆಯ ಕೇಂದ್ರಬಿಂದುವಾಗಿತ್ತು.

ಗದಗ ಜಿಲ್ಲೆಯ ಶಾಸಕರು ಹಾಗೂ ಕರ್ನಾಟಕ ಸರ್ಕಾರದ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ ತೋಂಟ-ದಾರ್ಯ ಶಾಲೆಯ ವಿದ್ಯಾರ್ಥಿಗಳಿಗೆ ಪ್ರಥಮ ಬಹುಮಾನ ನೀಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ಜಿಲ್ಲಾಧಿಕಾರಿ ಗೋವಿಂದರಡ್ಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ ಉಪಸ್ಥಿತರಿದ್ದರು.

ತೋಂಟದಾರ್ಯ ಶಾಲೆಯ ಶಿಕ್ಷಕರಾದ ಕೆ.ಎಂ. ಗೌಡರ, ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಾಯ ಎನ್.ವ್ಹಿ. ಗಾಳಿ, ಶಿಕ್ಷಕಿಯರಾದ ಸುರೇಖಾ ಕುಂಬಾರಗೇರಿಮಠ, ಮಂಜುಳಾ ಬೆಟಗೇರಿ, ಅಶ್ವಿನಿ ಕೋವಾರ, ಬಶೀರಾ ಕಲೇಬಾಯಿ ಸೇರಿದಂತೆ ಶಾಲೆಯ ಬೋಧಕ-ಬೋಧಕೇತರ ಸಿಬ್ಬಂದಿ ಹಾಜರಿದ್ದರು. ಪ್ರಥಮ ಬಹುಮಾನ ಪಡೆದ ಶಾಲೆಯ ವಿದ್ಯಾರ್ಥಿಗಳಿಗೆ ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಚೇರಮನ್ ಎಸ್.ಎಸ್. ಪಟ್ಟಣಶೆಟ್ಟರ ಹಾಗೂ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಅಭಿನಂದನೆ ಸಲ್ಲಿಸಿದ್ದಾರೆ.

# ಕಂಚಿನ ಮೂರ್ತಿ ದೇಣಿಗೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಮಾರುತಿ ದೇವಸ್ಥಾನ ಮತ್ತು ಅಲ್ಲಪ್ರಭುದೇವರ ಮಠದ ಲಿಂಗೈಕ್ಯ ಬಸವರಾಜೇಂದ್ರ ಸ್ವಾಮಿಗಳವರ ಕಂಚಿನ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ಮಾಡಿ ದೇವಸ್ಥಾನ ಹಾಗೂ ಶ್ರೀ ಮಠಕ್ಕೆ ತಲುಪಿಸಲಾಯಿತು.




ಗಂಗಾವತಿ ಮತ್ತು ಲಕ್ಕುಂಡಿ ಗ್ರಾಮದ ಭಕ್ತರು ದೇಣಿಗೆ ನೀಡಿದ ಈ ಕಂಚಿನ ಮೂರ್ತಿಗಳು ಒಂದು ಲಕ್ಷ ರೂ ಮೌಲ್ಯವುಳ್ಳದ್ದಾಗಿವೆ. 38 ವರ್ಷಗಳ ಕಾಲ ಮೌನವೃತವನ್ನು ಆಚರಿಸಿದ ಬಸವರಾಜೇಂದ್ರ ಸ್ವಾಮಿಗಳು ಮತ್ತು ಅತ್ತಿಮಬ್ಬೆ ಮಹಾದ್ವಾರದ ಹತ್ತಿರವಿರುವ ಮಾರುತಿ ದೇವಸ್ಥಾನಕ್ಕೆ ಅಲ್ಲಮಪ್ರಭುದೇವರ ಭಜನಾ ಸಂಘ ಹಾಗೂ ಮಾರುತಿ ಭಜನಾ ಸಂಘದವರು ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ಮಾಡಿ ತಲುಪಿಸಿದರು.

ಮೆರವಣಿಗೆಯಲ್ಲಿ ಸಿದ್ಧಲಿಂಗೇಶ್ವರ ಶ್ರೀಗಳು, ಮುದಕಯ್ಯ ಪತ್ರಿಮಠ ಸ್ವಾಮಿಗಳು, ಅಲ್ಲಮಪ್ರಭುದೇವರ ಸೇವಾ ಸಮಿತಿಯ ಸದಸ್ಯರು, ಗ್ರಾಮದ ಗುರು - ಹಿರಿಯುರು ಪಾಲ್ಗೊಂಡಿದ್ದರು.

# ಶಿರಹಟ್ಟಿಯಲ್ಲಿ ಆ.22ರಂದು ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವದನ್ನು ಖಂಡಿಸಿ ಶಿರಹಟ್ಟಿ ಪಟ್ಟಣದಲ್ಲಿ ಆ.22ರಂದು ಪ್ರತಿಭಟನೆ ನಡೆಸಿ ತಹಸೀಲ್ದಾರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಕುರುಬ ಸಮಾಜದ ಮುಖಂಡ ಹಾಗೂ ಪಟ್ಟಣ ಪಂಚಾಯಿತಿ ಸದಸ್ಯ ಮಂಜುನಾಥ ಘಂಟಿ ಹೇಳಿದರು.



ಅವರು ಶಿರಹಟ್ಟಿಯ ಶ್ರೀ ಬೀರೇಶ್ವರ ದೇವಸ್ಥಾನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಸಿಎಂ ಸಿದ್ದರಾಮಯ್ಯ ಅವರು ತಮ್ಮ ರಾಜಕೀಯ ಜೀವನದಲ್ಲಿ ತಪ್ಪುಗಳಿಗೆ ಅವಕಾಶ ನೀಡದೇ ಸ್ವಚ್ಛ ರಾಜಕಾರಣಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಬಿಜೆಪಿಯವರ ಸೂಚನೆ ಮೇರೆಗೆ ವಿಚಾರಣೆಗೆ ಅನುಮತಿ ನೀಡಿರುವುದು ಸರಿಯಲ್ಲ, ತಕ್ಷಣವೇ ರಾಜ್ಯಪಾಲರು ತಮ್ಮ ಹುದ್ದೆಗೆ ರಾಜೀನಾಮೆ ನೀಡಬೇಕು. ಇಲ್ಲದೇ ಇದ್ದಲ್ಲಿ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದರು.

ತಾಲೂಕಾ ಕುರುಬ ಸಮಾಜದ ಅಧ್ಯಕ್ಷ ಹೊನ್ನೇಶ ಪೋಟಿ, ತಾ.ಪಂ ಸದಸ್ಯ ದೇವಪ್ಪ ಲಮಾಣಿ, ಸಿದ್ದಪ್ಪ ಹೊಸಳ್ಳಿ, ಪ.ಪಂ ಸದಸ್ಯ ಹೊನ್ನಪ್ಪ ಶಿರಹಟ್ಟಿ, ಆನಂದ ಮಾಳೆಕೊಪ್ಪ, ದೇವಪ್ಪ ಬಟ್ಟೂರ, ಪರಶುರಾಮ ಈಳಿಗೇರ, ಮಂಜುನಾಥ ಹುಬ್ಬಳ್ಳಿ, ವಸಂತ ಜಗ್ಗಲರ, ಹನಮಂತ ಕುಳಗೇರಿ, ಮಹೇಂದ್ರ ಉಡಚಣ್ಣವರ, ನಿಂಗಪ್ಪ ಮಾಚೇನಹಳ್ಳಿ ಹನಂಮಂತ ಗೊಜನೂರ ಮತ್ತಿತರರು ಉಪಸ್ಥಿತರಿದ್ದರು.

'ಗೋ ಬ್ಯಾಕ್ ಗವರ್ನರ್' ಘೋಷಣೆ ಕೂಗಿದ ಸಿದ್ದರಾಮಯ್ಯ ಅಭಿಮಾನಿಗಳು

# ಬಿಜೆಪಿ, ಜೆಡಿಎಸ್‌ನಿಂದ ಬೀದಿನಾಟಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜಕೀಯ ಉದ್ದೇಶದಿಂದ, ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವದನ್ನು ಖಂಡಿಸಿ ರವಿವಾರ ಪಟ್ಟಣದ ಶಿಗ್ಲಿ ಕ್ರಾಸ್‌ನಲ್ಲಿ ಲಕ್ಷ್ಮೇಶ್ವರ ತಾಲೂಕಾ ಕುರುಬರ ಸಂಘ, ತಾಲೂಕ ಅಹಿಂದ ಸಂಘಟನೆ, ಸಿದ್ದರಾಮಯ್ಯ ಅಭಿಮಾನಿ ಬಳಗ ಹಾಗೂ ಕಾಂಗ್ರೆಸ್ ಕಾರ್ಯಕರ್ತರಿಂದ ಪ್ರಮುಖ ರಸ್ತೆಯಲ್ಲಿ ರಸ್ತೆ ತಡೆ ನಡೆಸುವ ಮೂಲಕ ಬೃಹತ್ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕರಾದದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ ಮತ್ತು ರಾಮಕೃಷ್ಣ ದೊಡ್ಡಮನಿ, ಕೇಂದ್ರ ಹಾಗೂ ರಾಜ್ಯ ಬಿಜೆಪಿ, ಜೆಡಿಎಸ್‌ನವರು ರಾಜ್ಯಪಾಲರ ಮುಖಾಂತರ ಸಿಎಂ ಸಿದ್ದರಾಮಯ್ಯ ವಿರುದ್ಧ ಷಡ್ಯಂತ್ರ ರೂಪಿಸುತ್ತಿದ್ದಾರೆ. ರಾಜಕೀಯ ದುರುದ್ದೇಶದಿಂದ ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕೂಷನ್‌ಗೆ ಅನುಮತಿ ನೀಡಿದ್ದಾರೆ. ಕಾಂಗ್ರೆಸ್ ಸರಕಾರದ ದಕ್ಷ ಆಡಳಿತ ಸಹಿಸಲಾಗದೇ ಬಿಜೆಪಿ ಹಾಗೂ ಜೆಡಿಎಸ್ ರಾಜ್ಯಪಾಲರನ್ನು ದುರುಪಯೋಗ ಮಾಡಿಕೊಂಡು, ಸರಕಾರವನ್ನು ಅಸ್ಥಿರಗೊಳಿಸಲು ಹೊರಟಿದೆ. ಸಿದ್ದರಾಮಯ್ಯ ಅವರ 40 ವರ್ಷಗಳ ರಾಜಕೀಯ ಇತಿಹಾಸದಲ್ಲಿ ಭ್ರಷ್ಟಾಚಾರದ ಯಾವುದೇ ಕಪ್ಪುಚುಕ್ಕಿಯನ್ನು ತಾಕಿಸಿಕೊಂಡಿಲ್ಲ. ಆದರೆ ಹಗರಣವೇ ಅಲ್ಲದ ಮುಡಾ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ ಮತ್ತು ಜೆಡಿಎಸ್‌ನವರು ಬೀದಿನಾಟಕ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೆಪಿಸಿಸಿ ಕಾರ್ಯದರ್ಶಿ ಟಿ. ಈಶ್ವರ ಹಾಗೂ ಅಹಿಂದ ಸಂಘಟನೆಯ ಗದಗ ಜಿಲ್ಲಾ ಗೌರವಾಧ್ಯಕ್ಷ ಸೋಮಣ್ಣ ಬೆಟಗೇರಿ ಮಾತನಾಡಿ, ಬಡವರ, ದೀನದಲಿತರ, ಅಹಿಂದ ವರ್ಗದವರಿಗೆ ಅನುಕೂಲವಾಗುವಚಿತೆ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿರುವ ಮುಖ್ಯಮಂತ್ರಿಯರನ್ನು ರಾಜೀನಾಮೆ ಕೇಳುತ್ತಿರುವುದು ಜನವಿರೋಧಿ ನೀತಿಯಾಗಿದೆ. ಬಿಜೆಪಿ ಮತ್ತು ಜೆಡಿಎಸ್ ಮುಖಂಡರ ನಿರ್ದೇಶನದಂತೆ ರಾಜ್ಯಪಾಲರು ವರ್ತಿಸುತ್ತಿದ್ದಾರೆ. ಸಿದ್ದರಾಮಯ್ಯ ಬಗ್ಗೆ ಮಾತನಾಡುವ ನೈತಿಕತೆ ಇಲ್ಲದ ಬಿಜೆಪಿ, ಜೆಡಿಎಸ್ ಪಕ್ಷದವರು ಕಾಂಗ್ರೆಸ್ ಸರ್ಕಾರದ ಉತ್ತಮ ಆಡಳಿತಕ್ಕೆ ಕಳಂಕ ತರಲು ಪ್ರಯತ್ನ ಮಾಡುತ್ತಿದ್ದಾರೆ ಎಂದು ಅಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಅಮರೇಶ ತೆಂಬದಮನಿ, ತಾಲೂಕಾ ಕುರುಬರ ಸಂಘದ ಅಧ್ಯಕ್ಷ ಶೇಕಣ್ಣ ಕಾಳೆ, ಚನ್ನಪ್ಪ ಜಗಲಿ, ಗುರುನಾಥ ದಾನಪ್ಪನವರ, ಫಕ್ಕೀರೇಶ ಮ್ಯಾಟಣ್ಣವರ, ರಾಮಣ್ಣ ಅಡಗಿಮನಿ, ಪದ್ಮರಾಜ ಪಾಟೀಲ್, ತಿಪ್ಪಣ್ಣ ಸಂಶಿ, ವಿ.ಜಿ. ಪಡಗೇರಿ, ಸುರೇಶ ಭೀರಣ್ಣವರ, ಭಾಗ್ಯಶ್ರೀ ಬಾಬಣ್ಣ, ಗೀತಾ ಭೀರಣ್ಣನವರ, ಬಸವರೆಡ್ಡಿ ಹನಮರೆಡ್ಡಿ, ನೀಲಪ್ಪ ಶೇರಸೂರಿ, ಯಲ್ಲಪ್ಪ ಸೂರಣಗಿ, ಫಿರೋಜ್ ಆಡೂರ, ರಮೇಶ ಗಡದವರ, ನೀಲಪ್ಪ ಪಡಗೇರಿ, ಇಸ್ಮಾಯಿಲ್ ಆಡೂರ, ಸತೀಶ ಪಾಟೀಲ್, ರಾಜಣ್ಣ ಹೊಳಲಾಪುರ, ಶರಣು ಗೋಡಿ, ಹರೀಶ ಲಕ್ಷ್ಮೇಶ್ವರ, ರಾಮಣ್ಣ ಲಮಾಣಿ (ಶಿಗ್ಲಿ),ಯಲ್ಲಪ್ಪ ತಳವಾರ, ರಾಜು ಓಲೇಕಾರ, ಅಣ್ಣಪ್ಪ ರಾಮಗೇರಿ, ಮಹೇಶ ಲಮಾಣಿ, ಲಕ್ಷ್ಮಣ ಲಮಾಣಿ, ಯಲ್ಲಪ್ಪ ಹಂಜಗಿ, ಎಂ.ಎಂ. ಗಾಡಗೋಳಿ, ನೂರಅಹ್ಮದ ನಿಡಗುಂದಿ ಮುಂತಾದವರು ಉಪಸ್ಥಿತರಿದ್ದು, ತಹಸೀಲ್ದಾರರ ಮುಖಾಂತರ ರಾಷ್ಟ್ರಪತಿಗಳಿಗೆ ಮನವಿ ಅರ್ಪಿಸಿದರು.

ಇದೆ ವೇಳೆ ಕೇಂದ್ರ ಹಾಗೂ ರಾಜ್ಯ ಬಿಜೆಪಿ, ಜೆಡಿಎಸ್ ವಿರುದ್ಧ ಹಾಗೂ ಗೋ ಬ್ಯಾಕ್ ಗವರ್ನರ್ ಎಂಬ ಘೋಷಣೆ ಕೂಗುವ ಮೂಲಕ ಪ್ರತಿಭಟನೆಯಲ್ಲಿ ಪಾಲ್ಗೊಂಡ ಸಾವಿರಾರು ಕಾರ್ಯಕರ್ತರು ಆಕ್ರೋಶ ಹೊರಹಾಕಿದರು.

# ಶ್ರೀ ಜಗದಂಬಾ ಪಾಲಕಿ ಉತ್ಸವ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಮರಾಠಾ ವಿದ್ಯಾ ವರ್ಧಕ ಸಂಘದ ವತಿಯಿಂದ ಆಗಸ್ಟ್ 20ರ ರಾತ್ರಿ 8 ಗಂಟೆಗೆ ಸಂತ ಮಂಡಳಿಯಿಂದ ಭಜನೆಯೊಂದಿಗೆ ಪಾಲಕಿ ಸೇವೆ, ಮಹಾಮಂಗಳಾರತಿಯನ್ನು ನೇರವೇರಿಸಲಾಗುವದು. ಈ ವಾರದ ಪಾಲಕಿ ಸೇವೆಯನ್ನು ವಿಮಲೇಶ ಜ್ಯುವೆಲರ್ಸ್‌ನ ಸುರೇಶ ಗೋಪಾಲರಾವ ರೇವಣಕರ ಇವರ ವತಿಯಿಂದ ನೇರವೇರಿಸಲಾಗುವದು.

ಸಮಾಜ ಬಾಂಧವರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಎಲ್ಲರೂ ಶ್ರೀದೇವಿಯ ಕೃಪೆಗೆ ಪಾತ್ರರಾಗಲು ಸಂಘದ ಅಧ್ಯಕ್ಷ ವಿನಿತಕುಮಾರ ವ್ಹಿ.ಜಗತಾಪ, ಗೌರವ ಕಾರ್ಯದರ್ಶಿ ಶಿವಾಜಿ ವಾಯ್.ಗ್ವಾರಿ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

# 'ರುಕ್ಮಿಣೀಶ ವಿಜಯ' ಸಂಗೀತ ರೂಪಕ ನಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹಾತಲಗೇರಿ ರಸ್ತೆಯ ಕರಿಯಮ್ಮಕಲ್ಲು ಬಡಾವಣೆಯ ಶ್ರೀಗುರುರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಗರು ರಾಘವೇಂದ್ರ ಸೇವಾ ಸಮಿಯ ಆಶ್ರಯದಲ್ಲಿ ಶ್ರೀಗುರು ರಾಘವೇಂದ್ರ ಕಲಾ ಬಳಗದ ವತಿಯಿಂದ ಶ್ರೀ ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವ ಅಂಗವಾಗಿ ಆಗಸ್ಟ್ 21ರ ಸಂಜೆ 6 ಗಂಟೆಗೆ 'ರುಕ್ಮಿಣೀಶ ವಿಜಯ' ಎಂಬ ಭಕ್ತಿ ಪ್ರಧಾನ ಸಂಗೀತ ರೂಪಕ ಪ್ರಯೋಗಗೊಳ್ಳಲಿದೆ. ಹಿರಿಯ ರಂಗ ನಿರ್ದೇಶಕರಾದ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಈ ರೂಪಕವನ್ನು ರಚಿಸಿ ನಿರ್ದೇಶಿಸಿದ್ದಾರೆ.

ಸಭಾಧ್ಯಕ್ಷರು ಹಾಗೂ ಭೀಷ್ಮಕರಾಗಿ ಅಂದಾನಪ್ಪ ವಿಭೂತಿ, ಅರವಿಂದ-ರಕ್ಷಿತಾ ಕುಲಕರ್ಣಿ, ಶ್ರೀ ವಾದಿರಾಜ ಪ್ರಭುಗಳು-ಉಜ್ವಲ ಕಬಾಡಿ, ಹಯಗ್ರೀವ ದೇವರು-ಶ್ರದ್ಧಾ ಕಬಾಡಿ, ನಾರದ-ಅನಘಾ ಕುಲಕರ್ಣಿ, ವಸುದೇವ-ರಾಘವೇಂದ್ರ ಮುಜುಮದಾರ, ಮಕರಂದ-ಶ್ವೇತಾ ಸುರೇಬಾನ್, ಬಾಲ ಗೋಪಾಲಕರ ಪಾತ್ರದಲ್ಲಿ ರೇಣುಕಾ, ಅನುಷ್ಕಾ ಜಾಲಿಹಾಳ, ಶ್ರೀವಲ್ಲಭ, ಪ್ರಭುಗೌಡ, ಸುಕೃತಿ ಪಾಟೀಲ್, ಬಾಲಕೃಷ್ಣನಾಗಿ ಅನ್ವಿತಾ ಹುಯಿಲಗೋಳ, ಬಲರಾಮ-ರಂಜಿತಾ ಕುಲಕರ್ಣಿ, ಯಶೋಧೆ-ಯಶೋಧಾ ಗುಮಾಸ್ತೆ, ಗೋಪಮ್ಮ-ಅವನಿ ಕುಲಕರ್ಣಿ, ಧೇನುಕಾಸುರ-ಆರಾಧ್ಯ ದೇಶಪಾಂಡೆ, ಪ್ರಲಂಬಾಸುರ-ಅನನ್ಯ ದೇಶಪಾಂಡೆ, ಕಂಸ ಮಾಮಾ-ವಿಶ್ವನಾಥ್ ಬೇಂದ್ರೆ, ಕ್ರೂರ ಹಾಗೂ ಕಾಲಯವ-ಅಮರೇಶ ರಾಂಪುರ, ಸಾಂದೀಪನಿ ಗುರುಗಳು ಹಾಗೂ ಮುಚಕುಂದರಾಗಿ ಪ್ರೊ. ಮುರಳೀಧರ ಸಂಕನೂರ, ರುಕ್ಮಿಣಿ ಪಾತ್ರದಲ್ಲಿ ಶುಭಾಂಗೀ, ಶ್ರೀ ಕೃಷ್ಣ- ಸುರಭಿ ಮಹಾಶಬ್ದಿ, ರುಕ್ಮೀ-ಹೇಮಂತ್ ದಳವಾಯಿ, ವಿಶೇಶ ಬಾಲಕೃಷ್ಣನಾಗಿ ಉದ್ಧವ್ ಗುಡಿ, ಆಚಾರ್ಯನಾಗಿ ಮೌನೇಶ್ ಬಡೀಗೇರ ಅಭಿನಯಿಸಲಿದ್ದಾರೆ.

ಹಿರಿಯ ಕಲಾವಿದ ರಂಗಪ್ಪ ಹುಯಿಲಗೋಳ ಅವರ ಪ್ರಸಾಧನ, ಸುಮಧ್ವ ಅವರ ಬೆಳಕು, ಕಲ್ಮೇಶ್ವರ ತೇರದಾಳ ಅವರು ತಬಲಾ ಸಾಥ್ ನೀಡಲಿದ್ದಾರೆ ಎಂದು ಶ್ರೀಗುರು ರಾಘವೇಂದ್ರ ಸೇವೆ ಸಮೀತಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಶಿರಹಟ್ಟಿ ಪಟ್ಟಣ ಪಂಚಾಯಿತಿಯಲ್ಲಿ ಮಹಿಳಾ ದರ್ಬಾರ್‌ಗೆ ಕ್ಷಣಗಣನೆ । ಇಂದು ಚುನಾವಣೆ**

# ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣ ಪಂಚಾಯಿತಿಯ 10ನೇ ಅವಧಿಗಾಗಿ ನಿಗದಿಪಡಿಸಿದ ಮೀಸಲಾತಿಯಂತೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳಾ ವರ್ಗಕ್ಕೆ ಮೀಸಲಾಗಿದ್ದು, ಸಹಜವಾಗಿಯೇ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಪಕ್ಷದಲ್ಲಿ ತೀವ್ರ ಪೈಪೋಟಿ ಮೂಡಿದೆ. ಹೀಗಾಗಿ ಪಟ್ಟಣ ಪಂಚಾಯಿತಿಯಲ್ಲಿ ಮಹಿಳಾ ಅಧ್ಯಕ್ಷ-ಉಪಾಧ್ಯಕ್ಷರ ದರ್ಬಾರ್‌ಗೆ ಕ್ಷಣಗಣನೆ ಆರಂಭವಾಗಿದ್ದು, ಕೊನೆಯ ಕ್ಷಣದಲ್ಲಿ ಯಾರಿಗೆ ಅಧ್ಯಕ್ಷ ಗದ್ದುಗೆ ಒಲಿಯುತ್ತದೆ ಎಂಬ ಕುತೂಹಲ ಮೂಡಿಸಿದೆ.

ಪ.ಪಂ ವ್ಯಾಪ್ತಿಯಲ್ಲಿ ಬರುವ 18 ವಾರ್ಡ್‌ಗಳಲ್ಲಿ ಕಾಂಗ್ರೆಸ್‌ನ 11 ಸದಸ್ಯರಿದ್ದು, ಬಿಜೆಪಿ 7 ಸದಸ್ಯರನ್ನು ಹೊಂದಿದೆ. ಕಾಂಗ್ರೆಸ್ ಪಕ್ಷದಲ್ಲಿ ಹಿಂದಿನ ಅವಧಿಯಲ್ಲಿ ಗಂಗಮ್ಮ ಆಲೂರ ಮತ್ತು ನೀಲವ್ವ ಹುಬ್ಬಳ್ಳಿ ಅಧಿಕಾರ ನಡೆಸಿದ್ದರು. ಇದೀಗ ಅದೇ ಪಕ್ಷದ ವಾರ್ಡ್ ನಂ.15ರ ದೇವಕ್ಕ ಗುಡಿಮನಿ, ವಾರ್ಡ್ ನಂ.11ರ ದಾವಲಬಿ ಮಾಚೇನಹಳ್ಳಿ ಹಾಗೂ ಈ ಹಿಂದೆ ಉಪಾಧ್ಯಕ್ಷೆಯಾಗಿದ್ದ ನೀಲವ್ವ ಹುಬ್ಬಳ್ಳಿ ಅವರು



ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ ಪ್ರತಿಕ್ರಿಯೆ ನೀಡಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಮತ್ತು ಪಕ್ಷದ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲರ ಮಾರ್ಗದರ್ಶನದಲ್ಲಿ ಅಧ್ಯಕ್ಷ-ಉಪಾಧ್ಯಕ್ಷರನ್ನು ಅಂತಿಮಗೊಳಿಸಲಾಗುವುದು. ಎಂದರು.

ಸಹ ಅಧ್ಯಕ್ಷ ಸ್ಥಾನದ ರೇಸ್‌ನಲ್ಲಿದ್ದು, ಈ ಮೂವರು ಸದಸ್ಯರು ಪಕ್ಷದ ಮುಖಂಡರುಗಳಲ್ಲಿ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ. ಪಕ್ಷದ ಮುಖಂಡರು ಯಾವುದೇ ಗೊಂದಲವಿಲ್ಲದೇ ಅಧ್ಯಕ್ಷ-ಉಪಾಧ್ಯಕ್ಷರನ್ನು ಒಮ್ಮತದಿಂದ ಆಯ್ಕೆ ಮಾಡುವುದಕ್ಕೆ ಈಗಾಗಲೇ ಹಲವು ಸುತ್ತಿನ ಮಾತುಕತೆ ನಡೆಸಿರುವ ಬಗ್ಗೆ ಕೇಳಿಬರುತ್ತಿದೆ.

ಪ.ಪಂ ಅಧಿಕಾರ ಹಿಡಿಯುವುದಕ್ಕೆ ಬಿಜೆಪಿಗೆ ಸಂಖ್ಯಾಬಲದ ಕೊರತೆಯಿದ್ದು, ಸಧ್ಯ 7 ಸದಸ್ಯರನ್ನು ಹೊಂದಿದೆ. ಜೊತೆಗೆ ಶಾಸಕರ ಮತ್ತು ಸಂಸದರ ಬೆಂಬಲ ಸಿಕ್ಕರೂ ಸಹ ಬಹುಮತದ ಕೊರತೆಯಾಗುವ ಸಾಧ್ಯತೆಯಿದೆ. ಆದಾಗ್ಯೂ ಈ ಹಿಂದೆ ಪಟ್ಟಣ ಪಂಚಾಯಿತಿಯಲ್ಲಿ ಎರಡೂ ಪಕ್ಷಗಳು ನಡೆಸಿದ ಕುದುರೆ ವ್ಯಾಪಾರವನ್ನು ಪಟ್ಟಣದ ಜನತೆ ಮರೆತಿಲ್ಲ.

ಶಿರಹಟ್ಟಿ ಪ.ಪಂನಲ್ಲಿ ಇದೇ ಮೊದಲ ಬಾರಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಎರಡೂ ಸ್ಥಾನಗಳು ಮಹಿಳೆಯರಿಗೆ ಲಭಿಸಿದ್ದು, ಇದನ್ನು ಸದುಪಯೋಗಪಡಿಸಿಕೊಳ್ಳುವುದಕ್ಕೆ ಅರ್ಹ ಸದಸ್ಯರು ಸಾಧ್ಯವಿರುವ ಎಲ್ಲ ಕಸರತ್ತುಗಳನ್ನು ಮಾಡುತ್ತಿದ್ದಾರೆ. ಮೀಸಲಾತಿ ವಿಳಂಬದಿಂದಾಗಿ ಬೇಸತ್ತು ಹೋಗಿದ್ದ ಸದಸ್ಯರ ಮುಖದಲ್ಲಿ ಇದೀಗ ಮಂದಹಾಸ ಮೂಡಿದ್ದು, ಮತ್ತೆ

ಪಟ್ಟಣ ಪಂಚಾಯಿತಿಯ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ಆ.20ರಂದು ಚುನಾವಣೆ ನಡೆಯಲಿದ್ದು, ಮುಂಜಾನೆ 10ರಿಂದ 12 ಗಂಟೆವರೆಗೆ ನಾಮಪತ್ರ ಸ್ವೀಕೃತಿ ಮತ್ತು ಮಧ್ಯಾಹ್ನ 2 ಗಂಟೆಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಸಭೆಯನ್ನು ನಿಗದಿಪಡಿಸಲಾಗಿದೆ.

– ಅನಿಲ ಬಡಿಗೇರ.
ಚುನಾವಣಾಧಿಕಾರಿ, ತಹಸೀಲ್ದಾರರು.

ಪಟ್ಟಣದ ಅಭಿವೃದ್ಧಿ ದೃಷ್ಟಿಯಿಂದ ಮುನ್ನಲೆಗೆ ಬರಲು ಕಾಯುತ್ತಿದೆ. ಪಟ್ಟಣ ಪಂಚಾಯಿತಿಯ ಹೊಸ ಮನ್ವಂತರಕ್ಕೆ ಮಹಿಳಾ ಅಧ್ಯಕ್ಷ-ಉಪಾಧ್ಯಕ್ಷರು ಯಾರಾಗಲಿದ್ದಾರೆ ಎಂಬ ಕುತೂಹಲ ಸಾರ್ವಜನಿಕರಲ್ಲಿದೆ.

ಈ ಕುರಿತು ಪ್ರತಿಕ್ರಿಯಿಸಿದ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಬಹುಮತದ ಕೊರತೆ ಇರುವ ಕಾರಣ ಪಟ್ಟಣದ ಅಭಿವೃದ್ಧಿಗೆ ಸಹಕಾರ ನೀಡಲಾಗುವುದು ಎಂದರು.

# ಕ್ರೀಡೆಯಿಂದ ದೈಹಿಕ ಸದೃಢತೆ ಸಾಧ್ಯ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿಯೊಬ್ಬರೂ ಯಾವುದಾದರೊಂದು ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ದೈಹಿಕವಾಗಿ ಸಧೃಡರಾಗಬೇಕು. ಕ್ರೀಡೆಗಳು ಮನುಷ್ಯನ ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯವನ್ನು ಸ್ಥಿರವಾಗಿರಿಸುತ್ತದೆ. ಅಲ್ಲದೇ ದಿನಪೂರ್ತಿ ಉತ್ಸಾಹದಿಂದ ಕಾರ್ಯನಿರ್ವಹಿಸಲು ಸಹಕಾರಿಯಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯದ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ ಪದವಿಪೂರ್ವ ತಾಲೂಕು ಮಟ್ಟದ ಕ್ರೀಡಾ ಕೂಟಕ್ಕೆ ಚಾಲನೆ ಮಾತನಾಡಿದ ಅವರು, ಉತ್ತಮ ಕಲಿಕೆಗೆ ಮಕ್ಕಳು ಆರೋಗ್ಯವಂತರಾಗಿರಬೇಕು. ವಿದ್ಯಾರ್ಥಿಗಳು ಓದಿಗಷ್ಟೇ ಸೀಮಿತವಾದರೆ ಮಾನಸಿಕ ಒತ್ತಡ ಹೆಚ್ಚುತ್ತದೆ. ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಾಗ ಒತ್ತಡ ನಿವಾರಣೆಯಾಗುತ್ತದೆ. ಕ್ರೀಡೆಗಳಿಂದ ಸ್ಪರ್ಧಾ ಮನೋಭಾವ ಮೂಡುತ್ತದೆ. ಆದ್ದರಿಂದ ಶಿಕ್ಷಕರು ಮಕ್ಕಳಲ್ಲಿ ಕ್ರೀಡಾಸಕ್ತಿ ಬೆಳೆಸಬೇಕು ಎಂದರು.

ತೋಂಟದಾರ್ಯ ಮಠದ ವ್ಯವಸ್ಥಾಪಕ ಜಿ.ವ್ಹಿ. ಹಿರೇಮಠ ಮಾತನಾಡಿ, ಕ್ರೀಡಾ ಚಟುವಟಿಕೆಗಳು ಸಮಗ್ರ ಶಿಕ್ಷಣದ ಭಾಗ. ಕ್ರೀಡೆಯಿಂದ ಆರೋಗ್ಯ ಸುಧಾರಿಸುತ್ತದೆ. ಓದಿನಲ್ಲಿ ಆಸಕ್ತಿ ಮೂಡಿಸಲು ಕ್ರೀಡಾ ಚಟುವಟಿಕೆಗಳು ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತೋಂಟದಾರ್ಯ ವಿದ್ಯಾಪೀಠದ ಆಡಳಿತಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ್, ಗೋಣಿಬಸಪ್ಪ ಕೊರ್ಲಹಳ್ಳಿ, ಸಿ.ಕೆ. ಬೆಳವಟಿಗಿ, ವಿರೂಪಾಕ್ಷ ಲಕ್ಕುಂಡಿ, ಶಿಕ್ಷಕ ಪ್ರಕಾಶ ತಳವಾರ, ಮಲ್ಲಿಕಾರ್ಜುನ ಮಡಿವಾಳರ, ಬಸವರಾಜ ಪೂಜಾರ, ವಾಯ್ ಬಿಳಗಿ, ವಿ.ಎಫ್. ಪಾಟೀಲ, ಹನಮಂತ ಪೂಜಾರ, ಎಸ್.ಎನ್. ಕಲ್ಲಿಗನೂರ, ಎಸ್. ಸಂಕಣ್ಣವರ ಮುಂತಾದವರಿದ್ದರು.

**ಹೊಸ ಪಡಿತರ ಚೀಟಿ ಪಡೆಯಲು ಆಗುತ್ತಿರುವ ತೊಂದರೆ ಸರಿಪಡಿಸಲು ಆಗ್ರಹ**

# ಸ್ಲಂ ನಿವಾಸಿಗಳಿಂದ ಪ್ರತಿಭಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಹೊಸ ಪಡಿತರ ಚೀಟಿಗಳಿಗೆ ಅರ್ಜಿ ಸಲ್ಲಿಕೆಯನ್ನು ಸುಮಾರು ಒಂದೂವರೆ ವರ್ಷಗಳ ಕಾಲ ಸ್ಥಗಿತಗೊಳಿಸಲಾಗಿತ್ತು. ಇದೀಗ ಮತ್ತೆ ರಾಜ್ಯಾದಂತ ಹೊಸ ಪಡಿತರ ಚೀಟಿಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆ ಪ್ರಾರಂಭವಾಗಿದ್ದು, ಸಾಕಷ್ಟು ತೊಡಕುಗಳಿವೆ. ಈ ತೊಂದರೆಯನ್ನು ಸರಿಪಡಿಸಲು ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯ ಕರೆಯ ಮೇರೆಗೆ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ನೂರಾರು ಸ್ಲಂ ನಿವಾಸಿಗಳು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಆಹಾರ ಇಲಾಖೆ ಸಚಿವಾರಾದ ಕೆ.ಹೆಚ್. ಮುನಿಯಪ್ಪ ಅವರಿಗೆ ಮನವಿ ಸಲ್ಲಿಸಿದರು.

ಸ್ಲಂ ಜನಾಂದೋಲನ-ಕರ್ನಾಟಕದ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಪಡಿತರ ಚೀಟಿಯು ಒಂದು ಪ್ರಮುಖ ದಾಖಲೆಯಾಗಿದ್ದು, ಸಬ್ಸಿಡಿ ದರದಲ್ಲಿ ಆಹಾರ ಧಾನ್ಯ ಪಡೆಯಲು ಕಡ್ಡಾಯವಾಗಿದೆ. ಹೊಸದಾಗಿ ಅರ್ಜಿ ಸಲ್ಲಿಸಲು ಆನ್‌ಲೈನ್ ಸೆಂಟರ್‌ಗಳಿಗೆ ಜನರು ಹೋಗಿ ಅರ್ಜಿಗಳನ್ನು ಸಲ್ಲಿಸಲು ಹಲವು ಸಮಸ್ಯೆಗಳಿದ್ದು, ದಿನವೊಂದಕ್ಕೆಎ 4-5 ಅರ್ಜಿಗಳು ಸಲ್ಲಿಕೆ ಆಗುತ್ತಿವೆ.

ಇದರ ಬಗ್ಗೆ ಆಹಾರ ಸಚಿವರು ಗಂಭೀರವಾಗಿ ಪರಿಗಣಿಸಿ ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಆಗುತ್ತಿರುವ ತೊಂದರೆಯನ್ನು ಸರಿಪಡಿಸಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮಂಜುನಾಥ ಶ್ರೀಗಿರಿ, ಮೆಹರುನಿಸಾ ಢಾಲಾಯತ, ಮೈಮುನ ಬೈರಕದಾರ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ, ಮಲೇಶಪ್ಪ ಕಲಾಲ, ಮೆಹರುನಿಸಾ ಡಂಬಳ, ಚಂದ್ರಪ್ಪ ಲಕ್ಕುಂಡಿ, ದುರ್ಗಪ್ಪ ಮಣವಡ್ಡರ, ಶರಣಪ್ಪ ಬಿಂಗದಕಟ್ಟಿ, ಈರಮ್ಮ ಬೇವಿನಮರದ, ನಜೀರಅಹ್ಮದ ಹಾವಗಾರ, ಬಾಷಾಸಾಬ ಡಂಬಳ, ನಾಗರಾಜ ಮಣವಡ್ಡರ, ಶಿವಾನಂದ ಶಿಗ್ಲಿ, ರಾಜೇಸಾಬ ಸೈಯದ, ಮಂಜುನಾಥ ಒಂಟಿಯಲಿ ಮುಂತಾದವರಿದ್ದರು.

**ಪ್ರಕಾಶ್ ರಾಜ್ ಫೌಂಡೇಶನ್ ನೇತೃತ್ವದ ನಿರ್ದಿಗಂತ ತಂಡದವರಿಂದ ನಾಟಕ ಪ್ರದರ್ಶನ**

# ಮಕ್ಕಳಿಗೆ ನಾಟಕಗಳ ಅಭಿರುಚಿ ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ನಟರಂಗ ಸಾಂಸ್ಕೃತಿಕ ಕೇಂದ್ರದಲ್ಲಿ ಪ್ರಕಾಶ್ ರಾಜ್ ಫೌಂಡೇಶನ್ ನೇತೃತ್ವದ ನಿರ್ದಿಗಂತ ತಂಡದವರಿಂದ ಶಿಕ್ಷಣದಲ್ಲಿ ರಂಗಭೂಮಿ ಯೋಜನೆಯ ಭಾಗವಾಗಿ 'ಶಾಲಾರಂಗ' ಎಂಬ ಶೀರ್ಷಿಕೆ ಅಡಿಯಲ್ಲಿ ನಾಟಕ, ಹಾಡು, ಪ್ರಹಸನ, ಬೊಂಬೆ ಆಟಗಳು ಪ್ರದರ್ಶನಗೊಂಡವು. ನಟರಂಗ ಸಂಸ್ಥೆಯ ಮಕ್ಕಳಿಗೆ ರಂಗಭೂಮಿಯ ಕಾರ್ಯಗಾರ ಜರುಗಿತು.

ನಿರ್ದಿಗಂತ ತಂಡದವರು ವಿಶೇಷವಾಗಿ ಬ್ಲಾಕ್ ಬಲೂನ್, ಮರ ಮತ್ತು ಮನುಷ್ಯ ಬೊಂಬೆಯಾಟ, ಆಮೆ ಕಥೆಗಳನ್ನು ಅನುಸರಿಸಿ ಮೂರು ನಾಟಕಗಳ ಪ್ರದರ್ಶನ ನೀಡಿದರು. ಮುಂದಿನ ದಿನಮಾನಗಳಲ್ಲಿ ಮಕ್ಕಳಿಗೆ ರಂಗಭೂಮಿಯ ಮಹತ್ವ ಹಾಗೂ ಸಮಾಜವನ್ನು ನೋಡುವ ದೃಷ್ಟಿಕೋನ ಮತ್ತು ಮಕ್ಕಳ ಪ್ರಭುದ್ಧತೆಯನ್ನು ಹೆಚ್ಚಿಸುವುದು ನಾಟಕದ ಕಥಾ ಭಾಗವಾಗಿತ್ತು.

ಪತ್ರಕರ್ತ ಅಜಿತ್ ಘೋರ್ಪಡೆ ಮಾತನಾಡಿ,



ಇಂದಿನ ದಿನಮಾನದಲ್ಲಿ ಮಕ್ಕಳು ಕ್ರೀಡೆ, ನಾಟಕ, ಸಂಗೀತ, ಸಾಹಿತ್ಯದಂತಹ ಚಟವಟಿಕೆಗಳಿಂದ ದೂರ ಉಳಿಯುತ್ತ ಮೊಬೈಲ್ ಹಾಗೂ ಟಿವಿ ಮಾಧ್ಯಮಗಳಲ್ಲಿ ಆಕರ್ಷಿತರಾಗುತ್ತಿದ್ದಾರೆ. ಪೋಷಕರು ಮಕ್ಕಳಿಗೆ ನಾಟಕ, ಸಾಹಿತ್ಯ ಚಟವಟಿಕೆಗಳ ಅಭಿರುಚಿಯನ್ನು ಉಣಬಡಿಸಬೇಕಿದೆ ಎಂದು ಹೇಳಿದರು

ಡಾ. ಜಿ.ಬಿ. ಪಾಟೀಲ ಮಾತನಾಡಿ, ಜಿಲ್ಲೆಯ ಮಕ್ಕಳಿಗೆ ತಿಂಗಳಿಗೊಮ್ಮೆಯಾದರೂ ನಾಟಕ, ಸಂಗೀತ, ಸಾಹಿತ್ಯದಂತಹ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ನಟರಂಗ ಸಂಸ್ಥೆಯು ಅಭಿವೃದ್ಧಿ ಪಥದತ್ತ ಸಾಗಲಿ ಎಂದು ಹಾರೈಸಿದರು.

ನಟರಂಗ ಸಂಸ್ಥೆಯ ಅಧ್ಯಕ್ಷ ಸೋಮಶೇಖರಯ್ಯ ಚಿಕ್ಕಮಠ ಮಾತನಾಡಿ, ಕಳೆದ 10 ವರ್ಷಗಳಿಂದ ಆಸಕ್ತ ಮಕ್ಕಳಿಗೆ ರಂಗಭೂಮಿ ಚಟವಟಿಕೆಗಳು, ಸಂಗೀತ, ನೃತ್ಯ, ಭರತನಾಟ್ಯದಂತಹ ವಿಶೇಷ ತರಗತಿಗಳನ್ನು ಏರ್ಪಡಿಸುವುದರ ಜೊತೆಗೆ ಅವರಲ್ಲಿ ಸಂಗೀತ, ನೃತ್ಯ ಆಸಕ್ತಿ ಹೆಚ್ಚಿಸುವಲ್ಲಿ ಶ್ರಮಿಸಲಾಗುತ್ತಿದೆ. ಶಾಲಾರಂಗ ಎಂಬ ಒಂದು ಸಂಚಾರ ರಂಗಭೂಮಿಯಲ್ಲಿ ಮಹತ್ವವಾದ ಮೈಲಿಗಲ್ಲಾಗಿದೆ ಎಂದರು.

ರಂಗಕಲೆ ಆಸಕ್ತರಾದ ಅಂದಾನಪ್ಪ ವಿಭೂತಿ, ಆರ್.ಎನ್. ಕುಲಕರ್ಣಿ, ವಿ.ಎನ್. ಬೇಂದ್ರೆ, ಮೌನೇಶ್ ಬಡಿಗೇರ, ಗುಂಡಪ್ಪ ನಾಯಕ, ಶಿವಾಜಿ ಚವ್ಹಾಣ, ಷಣ್ಮುಖ ಹಾಗೂ ವರ್ತಕ ವಿಜಯಕುಮಾರ ಹಿರೇಮಠ ಇದ್ದರು. ನಟರಂಗದಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳು ಹಾಗೂ ಪೋಷಕರು ನಾಟಕವನ್ನು ವೀಕ್ಷಿಸಿದರು.



ಗದಗ-ಬೆಟಗೇರಿ ನಗರಸಭೆಯ ಕಚೇರಿಯಲ್ಲಿ ನುಲಿ ಚಂದಯ್ಯನವರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಪೌರಾಯುಕ್ತರಾದ ಮಹೇಶ ಪೋತದಾರ, ಎಇಇ ಹೆಚ್.ಎ. ಬಂಡಿವಡ್ಡರ, ಲೆಕ್ಕಾಧಿಕಾರಿ ಟಿ.ಹೆಚ್. ದ್ಯಾವನೂರ, ವ್ಯವಸ್ಥಾಪಕ ಪಿ.ಎಫ್. ಶೇರಖಾನೆ, ಆರ್.ಓ ಡಿ.ಎಚ್. ನದಾಫ್, ಎಲ್.ಜಿ, ಗಾಡಗೋಳಿ, ವಿ.ಡಿ. ರಾಮಗಿರಿ, ಎಂ.ಆರ್. ಪಾಟೀಲ, ಎಂ.ಎ. ಮುಜಾವರ, ಸುಷ್ಮಾ ಗುಡಿ, ಎಸ್. ಎನ್. ದಳವಾಯಿ, ಎನ್.ಬಿ. ಪಟ್ಟಣಶೆಟ್ಟಿ, ಬಿ.ಜಿ. ಹಿರೇಮಠ, ಎಲ್.ಬಿ. ಕದಂ., ಎಂ.ಕೆ. ಗುಡಿಸಾಗರ ಉಪಸ್ಥಿತರಿದ್ದರು.

**ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ**

# ರಾಜ್ಯಪಾಲರ ನಡವಳಿಕೆ ಪ್ರಜಾಪ್ರಭುತ್ವಕ್ಕೆ ಮಾರಕ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾತಂತ್ರ್ಯ ದಿನಾಚರಣೆ ಮರುದಿನವೇ ರಾಜ್ಯಪಾಲರು ವಿಷಯವೇ ಅಲ್ಲದ ಮುಡಾ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ತನಿಖೆಗೆ ಅನುಮತಿ ಕೊಟ್ಟಿದ್ದಾರೆ. ಸ್ವಾತಂತ್ರ್ಯ ದಿನಾಚರಣೆಯಂದು ಸಂವಿಧಾನ- ಸಾಂವಿಧಾನಿಕ ಮೌಲ್ಯಗಳ ಕುರಿತು ದೊಡ್ಡ ದೊಡ್ಡ ಮಾತನಾಡಿದ ಬಿಜೆಪಿ, ಜೆಡಿಎಸ್‌ನವರು ಸ್ಪಷ್ಟವಾಗಿ ರಾಜಭವನವನ್ನು ದುರುಪಯೋಗಪಡಿಸಿಕೊಂಡು ಸಂವಿಧಾನದ ಕಗ್ಗೊಲೆ ಮಾಡಿದ್ದಾರೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ವಿರೋಧ ಪಕ್ಷಗಳ ನಡೆಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯಪಾಲರು 26-07-2024 ಕೊಟ್ಟಿದ್ದ ನೋಟಿಸ್‌ಗೆ ವಿವರವಾದ ಉತ್ತರವನ್ನು ರಾಜ್ಯಪಾಲರ ಕಚೇರಿಗೆ ದಾಖಲೆಗಳ ಸಮೇತ ಕಳುಹಿಸಿಕೊಟ್ಟಿದ್ದರೂ, 01-08-2024ರಂದು ಸಂಪುಟ ಸಭೆ ನಡೆಸಿದ ಸರ್ಕಾರವು ರಾಜ್ಯಪಾಲರ ನೋಟಿಸ್ ದೋಷಪೂರಿತ ಹಾಗೂ ದ್ವೇಷ, ಪಿತೂರಿಕಾರಕ ಎಂದು ಹೇಳಿ ತಿರಸ್ಕರಿಸಲಾಗಿತ್ತು. ಅಲ್ಲದೇ, ದಾಖಲೆಗಳ ಸಮೇತ ಸರ್ಕಾರ ಉತ್ತರ ಕೊಟ್ಟಿತ್ತು.



ಮುಡಾ ಪ್ರಕರಣದಲ್ಲಿ ಯಾವುದೇ ತಿರುಳಿಲ್ಲ ಎಂಬುದು ರಾಜ್ಯಪಾಲರಿಗೂ ತಿಳಿದಿದೆ. ಆದರೂ ಸಹ ಪ್ರಾಸಿಕ್ಯೂಷನ್ನಿಗೆ ಅನುಮತಿ ನೀಡಿರುವುದು ರಾಜ್ಯದ ಜನರಿಗೆ ಮಾಡಿರುವ ದ್ರೋಹವಾಗಿದೆ. ಜನರಿಂದ ಆಯ್ಕೆಯಾದ ಸರ್ಕಾರವನ್ನು ಅಸ್ಥಿರಗೊಳಿಸಬೇಕು ಎಂಬ ಜೆಡಿಎಸ್ ಮತ್ತು ಬಿಜೆಪಿಯವರು ಅನೈತಿಕವಾದ ಆಟವನ್ನು ಆಡುತ್ತಿದ್ದಾರೆ. ರಾಜ್ಯಪಾಲರು ತಮ್ಮ ಹುದ್ದೆಯ ಘನತೆ ಮತ್ತು ಸಂವಿಧಾನದ ಆಶಯಗಳನ್ನು ಕೊಂದು ಹಾಕಿದ್ದಾರೆ. ಅವರು ಒಂದು ಪಕ್ಷದ ಏಜೆಂಟರಂತೆ ವರ್ತಿಸಿದ್ದಾರೆ ಎಂಬುದು ಸಂಶಯಾತೀತವಾಗಿದೆ ಎಂದಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ಜನರು ನಮ್ಮ ಮಾಲೀಕರೇ ಹೊರತು, ಈ ದುಷ್ಟರು ನಮ್ಮ ಮಾಲೀಕರಲ್ಲ. ಅವರನ್ನು ನಮ್ಮ ಶತ್ರುಗಳು ಹಾಗೂ ಸಮಸ್ತ ಶೋಷಿತ ಜನರ ಶತ್ರುಗಳು ಎಂದು ತೀರ್ಮಾನಿಸಿದ್ದೇವೆ. ಈ ದುಷ್ಟರನ್ನು ನಾವು ರಾಜಕೀಯವಾಗಿಯೇ ಎದುರಿಸುತ್ತೇವೆ. ಇದಕ್ಕೆಲ್ಲ ಹೆದರುವ ಪ್ರಶ್ನೆಯಿಲ್ಲ ಎಂದು ಅವರು ತಿಳಿಸಿದ್ದಾರೆ.

ರಾಜ್ಯಪಾಲರು ಸಂವಿಧಾನದ ಮೌಲ್ಯಗಳಿಗೆ ಬದ್ಧರಾಗಿದ್ದರೆ ಕರ್ನಾಟಕ ಲೋಕಾಯುಕ್ತವು ಪ್ರಾಸಿಕ್ಯೂಷನ್ನಿಗೆ ಅನುಮತಿ ಕೇಳಿರುವ ಗಂಭೀರವಾದ ವಿಷಯಗಳ ಕುರಿತು ಯಾಕೆ ಮೌನವಹಿಸಿದ್ದಾರೆ? ನೇರವಾಗಿ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಹಲವು ಬಿಜೆಪಿ ಮತ್ತು ಜೆಡಿಎಸ್‌ನ ಮುಖಂಡರ ಕುರಿತಂತೆ ಯಾಕೆ ಅನುಮತಿಯನ್ನು ನೀಡಲಿಲ್ಲ ಎಂದು ಅಶೋಕ ಮಂದಾಲಿ ಪ್ರಶ್ನಿಸಿದ್ದಾರೆ.


**ಪುರಸಭೆ ಕಾರ್ಯಾಲಯ ಮುಂಡರಗಿ.**

ಸಂ:ಪುಸಮುಂ/ಎಸ್.ಎಫ್.ಸಿ.&15ನೇ ಹ/ಇ-ಟೆಂಡರ್/2024-25 ದಿನಾಂಕ:17-08-2024

**ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ**

ಕರ್ನಾಟಕ ಪಾರದರ್ಶಕ ಅಧಿನಿಯಮ 1999&2000 ಕೆ.ಪಿ.ಪಿ. ಪೋರ್ಟಲ್‌ದಲ್ಲಿ 15ನೇ ಹಣಕಾಸು ಪುರಸಭೆ ಅನುದಾನ ಹಾಗೂ ಎಸ್.ಎಫ್.ಸಿ. ಕುನೀಸಪ ಅನುದಾನಗಳಲ್ಲಿ ಈ ಕೆಳಗೆ ನಮೂದಿಸಿದ ಕಾಮಗಾರಿಗಳ ನಿರ್ವಹಣೆಗಾಗಿ ಕೆ.ಡಬ್ಲ್ಯೂ-1,2 ದಸ್ತಾವೇಜನಲ್ಲಿ ಕೆ.ಪಿ.ಪಿ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರನ್ನು ಆಹ್ವಾನಹಿಸಲಾಗಿದೆ. ಇಂಡೆಂಟ್ ನಂ.1)DMA/2024-25/WS/WORK_INDENT26221(Other),2)DMA/2024-25 OW/WORK_INDENT21215(S.T) 3)DMA/2024-25/WS/WORK_INDENT 26195(S.C) 4) DMA/2024-5/WS/WORK_INDENT24633(S.C), 5)DMA /2024-25/WS/WORK_INDENT23477(Other).6)DMA/2024-25/EL/WORK _INDENT25684(Ele) ಕೆ.ಪಿ.ಪಿ ಪೋರ್ಟಲ್ ದಾಖಲೆಗಳಿಗಾಗಿ ಈ ಮೂಲಕ ಕೆಳಗೆ ನಮೂದಿಸಿದ ದಿನಾಂಕದಂದು ಆನಲೈನ್ ಮೂಲಕವೇ ಟೆಂಡರ ಸಲ್ಲಿಸುವುದು. ಕೆ.ಪಿ.ಪಿ. ಪೋರ್ಟಲ್ ನಲ್ಲಿ ಟೆಂಡರ ಸಲ್ಲಿಸುವ ಕೊನೆಯ ದಿನಾಂಕ: 27-08-2023, ಸಾಯಂಕಾಲ 4.30 ರವರೆಗೆ, ಟೆಂಡರ ತೆರೆಯುವ ದಿನಾಂಕ:- 28-08-2024 ಸಾಯಂಕಾಲ 4.00 ರ ವರೆಗೆ.

ಸಹಿ/-
ಮುಖ್ಯಾಧಿಕಾರಿ,
ಪುರಸಭೆ ಮುಂಡರಗಿ.

ಸಹಿ/-
ಆಡಳಿತಾಧಿಕಾರಿಗಳು
ಪುರಸಭೆ ಮುಂಡರಗಿ.

ವಾ.ಸಾ.ಇ/ಗದಗ/165/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka